ಸಂಪುಟ : 10 ಸಂಚಿಕೆ: 262 ಪುಟ : 4+2 ಬೆಲೆ: 3.00 ರವಿವಾರ ನವೆಂಬರ್ 30 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 262 Pages : 4+2 Price : 3.00 Sunday November 30 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವೈದ್ಯಾಧಿಕಾರಿ ಹುದ್ದೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಪಿಎಮ್ ಜನಮನ ಸಂಚಾರಿ ಆರೋಗ್ಯ ಘಟಕದಲ್ಲಿ ಹಾಗೂ ರಾಜ್ಯ/ಜಿಲ್ಲಾ ಮಟ್ಟದ ಮಾನವ ಸಂಪನ್ಮೂಲ ರೋಪ್–2025–26 ಅನುಮೋದನೆಯಂತೆ ಎಮ್‌ಬಿಬಿಎಸ್ ವೈದ್ಯಾಧಿಕಾರಿ ಹುದ್ದೆಗೆ ರೋಷ್ಟರ್ ಹಾಗೂ ಮೆರಿಟ್ ಆಧರಿಸಿ ನಿಬಂಧನೆಗೊಳಪಟ್ಟು ಪರಿಶಿಷ್ಟ ಜಾತಿ ಪ್ರವರ್ಗ–ಎ (ಸಾಮಾನ್ಯ ಅಭ್ಯರ್ಥಿ) ಅರ್ಹ ಅಭ್ಯರ್ಥಿಗಳಿಗೆ ಪ್ರತಿ ಮಂಗಳವಾರ ಮುಂಜಾನೆ 11 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಕಚೇರಿ ಸಮಯದಲ್ಲಿ Walk in Interviewನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸಭಾಂಗಣದ ಕೊಠಡಿ ಸಂಖ್ಯೆ–101, ಜಿಲ್ಲಾ ಆಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಇಲ್ಲಿ ಅರ್ಹ ಅಭ್ಯರ್ಥಿಯು ದೊರಕುವವರೆಗೂ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿದ್ಯಾರ್ಹತೆ ಮತ್ತು ಮೀಸಲಾತಿ ಸಂಬಂಧಿಸಿದ ಪ್ರತಿಗಳ ಒಂದು ಸೆಟ್ ಸ್ವಯಂ ದೃಢೀಕರಿಸಿದ ಝರಾಕ್ಸ್ ಪ್ರತಿಗಳೊಂದಿಗೆ, ಮೂಲ ದಾಖಲಾತಿಗಳನ್ನು ಹಾಜರುಪಡಿಸತಕ್ಕದ್ದು. ಎನ್.ಹೆಚ್.ಎಮ್ ಮಾರ್ಗಸೂಚಿ/ಆರ್.ಓ.ಪಿ ಪ್ರಕಾರ ಹುದ್ದೆಗಳನ್ನು ಹೆಚ್ಚು ಅಥವಾ ಕಡಿಮೆ ಮಾಡುವ ಅಧಿಕಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘಕ್ಕೆ ಇರುತ್ತದೆ. ಆಯ್ಕೆ ಸಮಿತಿ ಹಾಗೂ ಸಂಘದ ನಿರ್ಧಾರವೇ ಅಂತಿಮ ನಿರ್ಧಾರವಾಗಿರುತ್ತದೆ.

ಹೆಚ್ಚಿನ ಮಾಹಿತಿಗಳನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಲಗತ್ತಿಸಲಾಗಿದೆ ಎಂದು ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಪ್ರಕಟಣೆಯಲ್ಲಿ ತಿಳಿಸಿದೆ.

## ಮಹಿಳಾ ಸ್ವ-ಸಹಾಯ ಸಂಘಗಳ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಕೇಂದ್ರ ಪುರಸ್ಕೃತ ಅಮೃತ್ 2.0 ಯೋಜನೆಯ ಘಟಕವಾದ ಅಮೃತ್ ಮಿತ್ರ ಮಾರ್ಗಸೂಚಿ ಅನುಸಾರ ಮಹಿಳಾ ಸ್ವ–ಸಹಾಯ ಗುಂಪುಗಳ ಮೂಲಕ ಉದ್ಯಾನವನಗಳು, ಆಟದ ಮೈದಾನಗಳ ನಿರ್ವಹಣೆ ಹಾಗೂ ನೀರಿನ ಗುಣಮಟ್ಟತಾ ಪರೀಕ್ಷೆ, ತಾಂತ್ರಿಕ ಹಾಗೂ ತಾಂತ್ರೀಕೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಆಸಕ್ತ ಮಹಿಳಾ ಸ್ವ–ಸಹಾಯ ಗುಂಪುಗಳು ಭಾಗವಹಿಸಬೇಕಾಗಿದೆ. ಆಸಕ್ತ ಮಹಿಳಾ ಸ್ವ–ಸಹಾಯ ಗುಂಪುಗಳು ಕಾರ್ಯಾಲಯದಿಂದ ಅರ್ಜಿ ಪಡೆದುಕೊಂಡು ಡಿ. 12ರೊಳಗಾಗಿ ಪ್ರಸ್ತಾವನೆಯನ್ನು ಮುಚ್ಚಿದ ಲಕೋಟಿಯಲ್ಲಿ ಕಾರ್ಯಾಲಯಕ್ಕೆ ಸಲ್ಲಿಸಲು ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಮುಳಗುಂದ ಪಟ್ಟಣ ಪಂಚಾಯತಿಯ ಅಮೃತ್ ಮಿತ್ರ ಶಾಖೆಯನ್ನು ಸಂಪರ್ಕಿಸಬಹುದಾಗಿದೆ.

## ದರಪಟ್ಟಿ ಸಲ್ಲಿಕೆಗೆ ಡಿ.6 ಕೊನೆಯ ದಿನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪಂಚಾಯಿತಿ ಕಛೇರಿಗೆ ಅವಶ್ಯವಿರುವ ಕಂಪ್ಯೂಟರ್ ಮತ್ತು ಸ್ಕ್ಯಾನರ್ ಪೂರೈಸಲು ಅಧಿಕೃತ, ನೋಂದಾಯಿತ ಮಾರಾಟಗಾರರಿಂದ ದರ ಪಟ್ಟಿಗಳನ್ನು ಆಹ್ವಾನಿಸಲಾಗಿದೆ.

ಮಾಹಿತಿಗಳಿಗಾಗಿ https://zpgadag.karnataka.gov.in/ ಮತ್ತು https://gadag.nic.in ವೆಬ್‌ಸೈಟ್ ವಿಕ್ಷಿಸಬಹುದಾಗಿದೆ. ದರಪಟ್ಟಿ ಸಲ್ಲಿಸಲು ತಾಂತ್ರಿಕ ಸಮಸ್ಯೆ ಉಂಟಾದಲ್ಲಿ ಕಛೇರಿ ಅವಧಿಯಲ್ಲಿ ಸಹಾಯಕ ಜಿಲ್ಲಾ ಯೋಜನಾ ವ್ಯವಸ್ಥಾಪಕರು, ಜಿಲ್ಲಾ ಪಂಚಾಯಿತಿ, ಗದಗ ದೂರವಾಣಿ ಸಂಖ್ಯೆ–6363109865 ಇಲ್ಲಿಗೆ ಸಂಪರ್ಕಿಸಬಹುದಾಗಿದೆ. ದರಪಟ್ಟಿಯನ್ನು ಡಿ.6ರೊಳಗೆ ಸಲ್ಲಿಸಬಹುದಾಗಿದೆ ಎಂದು ಜಿ.ಪಂ ಸಿಇಓ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪತ್ರಿಕಾಗೋಷ್ಠಿಯಲ್ಲಿ ಸಚಿವ ಬಿ. ಶ್ರೀರಾಮುಲು ಆರೋಪ

# ಖುರ್ಚಿಯ ಜಗ್ಗಾಟದಲ್ಲಿ ಅಭಿವೃದ್ಧಿ ಕುಂಠಿತ

■ವಿಜಯಸಾಕ್ಷಿ ಸುದ್ದಿ, ಗದಗ



ಮಾಜಿ ಸಿಎಂ ಡಿ.ವಿ. ಸದಾನಂದಗೌಡ ಅವರು ಡಿ.ಕೆ. ಶಿವಕುಮಾರ ಅವರಿಗೆ ಬಂಬಲ ನೀಡುವ ಹೇಳಿಕೆಗೆ ಪ್ರತಿಕ್ರಿಯಿಸಿದ ಶ್ರೀರಾಮುಲು, ಸರಕಾರವೇ ಗೊಂದಲ ಸೃಷ್ಟಿಸಿಕೊಂಡು ಮಧ್ಯಂತರ ಚುನಾವಣೆಗೆ ಸಿದ್ಧವಾಗಿದೆ. ಹೀಗಾಗಿ ಯಾರಿಗೋ ಬಾಹ್ಯ ಬೆಂಬಲ ಕೊಡುವುದಿಲ್ಲ. ಅವರಾಗಿಯೇ ಸರಕಾರವನ್ನು ವಿಸರ್ಜಿಸಿದರೆ, ಅವರ ಜೊತೆ ಹೋಗುವುದಿಲ್ಲ. ಡಿ.ಕೆ. ಶಿವಕುಮಾರ ಜೊತೆ ಯಾವ ಕಾರಣಕ್ಕೂ ಬಿಜೆಪಿ ಕೈಜೋಡಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ನಿಶ್ಚಿತ ಎನ್ನುವದು ಸ್ಪಷ್ಟವಾಗಿದೆ. ಸಿದ್ದರಾಮಯ್ಯ ಕೊಟ್ಟ ಮಾತಿನಂತೆ ನಡೆದುಕೊಳ್ಳಲಿ ಅಥವಾ ಮಾತು ತಪ್ಪಿದ ಮಗನಾಗಿ ಅಧಿಕಾರದಲ್ಲಿ ಮುಂದುವರಿಯಲಿ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಹೇಳಿದರು.

ನಗರದ ತಮ್ಮ ನಿವಾಸದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಎಂ, ಡಿಸಿಎಂ ಇಬ್ಬರೂ ಹೈಕಮಾಂಡ್ ನಿರ್ಧಾರಕ್ಕೆ ಬದ್ಧ ಎನ್ನುವುದನ್ನು ಸ್ಪಷ್ಟಪಡಿಸಿದ್ದಾರೆ. ಕಾಂಗ್ರೆಸ್ ಹೈಕಮಾಂಡ್ ತೀರ್ಮಾನ ತೆಗೆದುಕೊಂಡಿದೆ. ಆ ಒಪ್ಪಂದದ ಪ್ರಕಾರ ಸಿಎಂ ಎರಡೂವರೆ ವರ್ಷದ ನಂತರ ಬೇರೆಯವರಿಗ ಸಿಎಂ ಸ್ಥಾನ ಬಿಟ್ಟುಕೊಡುವ ಮಾತಿದೆ. ಈಗ ಸಿಎಂ ಕುರ್ಚಿಗಾಗಿ ನಡೆದಿರುವ ಚರ್ಚೆಯೇ ಸಾಕ್ಷಿಯಾಗಿದೆ ಎಂದರು.

ಆದರೆ ಮುಖ್ಯಮಂತ್ರಿ ಕುರ್ಚಿಯ ಹಗ್ಗಜಗ್ಗಾಟದಲ್ಲಿ ರಾಜ್ಯದ ಅಭಿವೃದ್ಧಿ ಕುಂಠಿತವಾಗಿದೆ. ಸರಕಾರ ರೈತರ ಸಮಸ್ಯೆಗೆ ಸ್ಪಂದಿಸುತ್ತಿಲ್ಲ. ಕೇಂದ್ರ ಸರಕಾರ ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ಘೋಷಣೆ ಮಾಡಿದರೂ ಖರೀದಿ ಕೇಂದ್ರ ಆರಂಭ ಮಾಡುತ್ತಿಲ್ಲ. ಭತ್ತ ಬೆಳೆಯುವ ರೈತರಿಗೆ ತುಂಗಭದ್ರಾ ಜಲಾಶಯದಿಂದ 2ನೇ ಬೆಳೆಗೆ ನೀರು ಕೊಡುತ್ತಿಲ್ಲ. ಕಬ್ಬು ಬೆಳೆಗಾರರಿಗೆ ಸೂಕ್ತ ಬೆಲೆ ಸಿಗುತ್ತಿಲ್ಲ. ಉತ್ತರ ಕರ್ನಾಟಕ ಭಾಗದ ರೈತರು ಬೀದಿಗಿಳಿದು ಹೋರಾಟ ಮಾಡುತ್ತಿದ್ದರೂ ಸರಕಾರ ರೈತರ ಕಡೆ ಗಮನ ಕೊಡುತ್ತಿಲ್ಲ ಎಂದು ಆರೋಪಿಸಿದರು.

ಬೆಳಗಾವಿಯಲ್ಲಿ ನಡೆಯುವ ಚಳಿಗಾಲದ ಅಧಿವೇಶನ ಗೊಂದಲದ ಗೂಡಾಗುವ ಸಾಧ್ಯತೆಯಿದೆ. ಉತ್ತರ ಕರ್ನಾಟಕ ಅಭಿವೃದ್ಧಿ ಬಗ್ಗೆ ಚರ್ಚೆ ನಡೆಯುವುದು ಕಷ್ಟವಾಗಿದೆ. ಕೇವಲ ಕಾಟಾಚಾರಕ್ಕಾಗಿ ಬೆಳಗಾವಿ ಅಧಿವೇಶನ ನಡೆಸುತ್ತಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಹಾಗೂ ಪ್ರತಿಪಕ್ಷದ ಎಲ್ಲ ನಾಯಕರು ಅಧಿವೇಶನದಲ್ಲಿ ಉತ್ತರ ಕರ್ನಾಟಕ ಅಭಿವೃದ್ಧಿ ಬಗ್ಗೆ ಚರ್ಚೆ ನಡೆಸಲು ನಿರ್ಧಾರ ತೆಗೆದುಕೊಂಡಿದ್ದಾರೆ ಎಂದರು.

ಉತ್ತರ ಕರ್ನಾಟಕ ಭಾಗದ ಅನೇಕ ಮುಖಂಡರು ಮುಖ್ಯಮಂತ್ರಿ ಆಗಿದ್ದಾರೆ. ಅವರೆಲ್ಲರೂ ನಿರೀಕ್ಷಿತ ಪ್ರಮಾಣದಲ್ಲಿ ಅಭಿವೃದ್ಧಿ ಮಾಡಿಲ್ಲ. ಆದರೆ ಯಡಿಯೂರಪ್ಪ ಅವರು ಮಾತ್ರ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನಸೌಧ ನಿರ್ಮಾಣಕ್ಕೆ ಆದ್ಯತೆ ನೀಡಿದರು. ಬೆಳಗಾವಿಯಲ್ಲಿ ಅಧಿವೇಶನ ನಡೆಯಲು ಕಾರಣರಾದರು. ಪ್ರತ್ಯೇಕ ಉತ್ತರ ಕರ್ನಾಟಕ ರಚನೆಗೆ ನನ್ನ ಸಹಮತವಿಲ್ಲ. ಕರ್ನಾಟಕ ಅಖಂಡವಾಗಿಯೇ ಇರಬೇಕು ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡ ರವಿ ದಂಡಿನ, ಎಂ.ಎಂ. ಹಿರೇಮಠ, ಕಿರಣ ಬೂಮಾ, ಎಚ್.ಎಸ್. ಶಿವನಗೌಡ ಮುಂತಾದವರು ಉಪಸ್ಥಿತರಿದ್ದರು.

### ಲಿಂ. ಮಹಾಂತೇಶ ಬೀಳಗಿ ಅವರ ಗೌರವಾರ್ಥ ನುಡಿನಮನ ಕಾರ್ಯಕ್ರಮ

# ಲಿಂ. ಬೀಳಗಿ ಮಾತೃಹೃದಯದ ಅಪರೂಪದ ವ್ಯಕ್ತಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಧಾರವಾಡ ತಹಸೀಲ್ದಾರ ಡಾ. ಡಿ.ಎಚ್. ಹೂಗಾರ ಮಾತನಾಡಿ, ಧಾರವಾಡದಲ್ಲಿ ಅಧಿಕಾರಿಯಾಗಿ ಸೇವೆ ಸಲ್ಲಿಸಿದ ಅವಧಿಯಲ್ಲಿ ಅವರು ತೋರುತ್ತಿದ್ದ ಕಾರ್ಯಕ್ಷಮತೆ ಮತ್ತು ಜನಪರ ಕಾಳಜಿ ಇಂದಿಗೂ ಸ್ಮರಣೀಯವಾಗಿದೆ. ಉನ್ನತ ಹುದ್ದೆಯಲ್ಲಿದ್ದರೂ ಅಹಂಕಾರವಿಲ್ಲದೆ, ಎಲ್ಲರೊಂದಿಗೂ ಬೆರೆಯುವ ಅವರ ಗುಣ ಅವರನ್ನು ಉತ್ತಮ ಅಧಿಕಾರಿಯನ್ನಾಗಿ ಮಾಡಿತ್ತು ಎಂದು ತಿಳಿಸಿದರು.

ಲಿಂಗೈಕ್ಯ ಮಹಾಂತೇಶ ಬೀಳಗಿ ಅವರದು ಮಾತೃಹೃದಯದ ಅಪರೂಪದ ವ್ಯಕ್ತಿತ್ವ. ಉತ್ತರ ಕರ್ನಾಟಕದ ಅವರ ಮಾತಿನ ಸೊಗಡು ಎಲ್ಲರ ಹೃದಯ ಗೆದ್ದಿತು. ಯುವಕ, ಯುವತಿಯರಿಗೆ, ಸಾಧಕರಿಗೆ ಅವರು ಪ್ರೋತ್ಸಾಹಕ, ಪ್ರೇರಕ ವ್ಯಕ್ತಿಯಾಗಿದ್ದರು ಎಂದು ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ ಹೇಳಿದರು.

ಅವರು ಶನಿವಾರ ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಗಾಂಧಿ ಸ್ಮಾರಕ ವನದಲ್ಲಿ ಕಂದಾಯ, ಗ್ರಾಮೀಣಾಭಿವೃದ್ಧಿ, ವಾರ್ತಾ ಹಾಗೂ ಇತರ ಇಲಾಖೆಗಳ ಸರಕಾರಿ ನೌಕರರು ಆಯೋಜಿಸಿದ್ದ ಲಿಂ. ಮಹಾಂತೇಶ ಬೀಳಗಿ ಅವರ ಗೌರವಾರ್ಥ ನುಡಿನಮನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಹಾಂತೇಶ ಬೀಳಗಿ ಅವರು ಅಧಿಕಾರಿಗಳಿಗೆ, ವಿಶೇಷವಾಗಿ ಉತ್ತರ ಕರ್ನಾಟಕದ ಸರಕಾರಿ ಅಧಿಕಾರಿ, ನೌಕರರಿಗೆ ಪ್ರೋತ್ಸಾಹ ನೀಡುತ್ತಿದ್ದರು. ಪ್ರತಿಯೊಬ್ಬರಿಗೂ ಪ್ರೇರಣೆ ನೀಡುತ್ತಿದ್ದರು. ಅವರಿಂದ ಶಿಕ್ಷಣ, ಮಾರ್ಗದರ್ಶನ ಪಡೆದ ಅನೇಕರು ಇಂದು ರಾಜ್ಯ ಹಾಗೂ ಕೇಂದ್ರ ಸರಕಾರದ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಪ್ರೋತ್ಸಾಹದಿಂದಾಗಿ ಅನೇಕ ಗ್ರಾಮೀಣ ಪ್ರತಿಭಾವಂತ ಯುವಕ, ಯುವತಿಯರು ಇಂದು ಸರಕಾರಿ ಸೇವೆಯಲ್ಲಿದ್ದಾರೆ ಎಂದು ಹೇಳಿದರು.

ಉಪವಿಭಾಗಾಧಿಕಾರಿ ಶಾಲಂ ಹುಸೇನ್ ಮಾತನಾಡಿ, ಮಹಾಂತೇಶ ಬೀಳಗಿ ಅವರದು ಆಕರ್ಷಕ ವ್ಯಕ್ತಿತ್ವ. ಅವರ ನಿಸ್ವಾರ್ಥ ಸೇವೆ ಮತ್ತು ಮಾರ್ಗದರ್ಶನದಿಂದಾಗಿ ರವಿ ಚನ್ನಣ್ಣನವರ, ಯಶೋದಾ ಒಂಗೊಡಿ ಅವರಂತಹ ಅಧಿಕಾರಿಗಳು ಪೊಲೀಸ್ ಇಲಾಖೆಯಲ್ಲಿ ಸೇವೆಗೆ ಸೇರಿದ್ದಾರೆ. ಧಾರವಾಡದ ಕೀರ್ತಿಯನ್ನು ಅವರು ರಾಷ್ಟ್ರಮಟ್ಟಕ್ಕೆ ಹೆಚ್ಚಿಸಿದ್ದರು ಎಂದರು.

ಜಿಲ್ಲಾಧಿಕಾರಿಗಳ ಕಚೇರಿ ಚುನಾವಣಾ ತಹಸೀಲ್ದಾರ ಪ್ರವೀಣ ಹುಚ್ಚಣ್ಣವರ, ಸರಕಾರಿ ನೌಕರ ಸಂಘದ ಜಿಲ್ಲಾ ಅಧ್ಯಕ್ಷ ಎಸ್.ಎಫ್. ಸಿದ್ದನಗೌಡರ, ಡಿಸಿ ಕಚೇರಿಯ ಶಿರಸ್ತೇದಾರರಾದ ಮಲ್ಲಿಕಾರ್ಜುನ ಸೊಲಗಿ, ಕೆ.ಶ್ರೀಧರ, ಮುಖಂಡರಾದ ಲಕ್ಷ್ಮಣ ಬಕ್ಕಾಯಿ, ಮಹಾನಗರ ಪಾಲಿಕೆ ವಲಯ–3ರ ಸಹಾಯಕ ಆಯುಕ್ತ ಅರವಿಂದ ಜಮಖಂಡಿ, ಎ.ಸಿ. ಕಚೇರಿ ತಹಸೀಲ್ದಾರ ಅಶ್ವಿನಿ ಚಡಚಣ, ಬೇಂದ್ರೆ ಟ್ರಸ್ಟ್ ವ್ಯವಸ್ಥಾಪಕ ಪ್ರಕಾಶ ಬಾಳಿಕಾಯಿ, ಪತ್ರಕರ್ತ ಜಾವೀದ ಅದೋನಿ ಸೇರಿದಂತೆ ಇತರರು ಮಾತನಾಡಿ ಮಹಾಂತೇಶ ಬೀಳಗಿ ಅವರಿಗೆ ನುಡಿನಮನ ಸಲ್ಲಿಸಿದರು.

ಕಂದಾಯ ನಿರೀಕ್ಷಕ ಗುರು ಸುಣಗಾರ ಸ್ವಾಗತಿಸಿದರು. ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕ (ಪ್ರ) ಸುರೇಶ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಕಾರ್ಯಕ್ರಮ ನಿರೂಪಿಸಿದರು. ಎ.ಸಿ ಕಚೇರಿಯ ಶಿರಸ್ತೆದಾರ ರವಿ ಕಟ್ಟಿ ವಂದಿಸಿದರು. ▸▸3ನೇ ಪುಟಕ್ಕೆ

### ರಾಜ್ಯ ಸರ್ಕಾರದಿಂದ ರೈತ ವಿರೋಧಿ ನೀತಿ; ಕಳಕಪ್ಪ ಬಂಡಿ ಕಿಡಿ

## ಖುರ್ಚಿ ಕಿತ್ತಾಟದಲ್ಲಿ ಮಗ್ನವಾದ ಕಾಂಗ್ರೆಸ್



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ರಾಜ್ಯದ ಕಾಂಗ್ರೆಸ್ ಸರ್ಕಾರ ರೈತ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಆರೋಪಿಸಿ ತಾಲೂಕು ಬಿಜೆಪಿ ರೈತ ಮೋರ್ಚಾದಿಂದ ಶನಿವಾರ ನಗರದ ಕಾಲಕಾಲೇಶ್ವರ ವೃತ್ತದ ಬಳಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಮಾಜಿ ಸಚಿವ ಕಳಕಪ್ಪ ಬಂಡಿ ಮಾತನಾಡಿ, ರೈತರು ಹಗಲು- ರಾತ್ರಿ ಕಷ್ಟಪಟ್ಟು ಬೆವರು ಸುರಿಸಿ ಬೆಳೆದ ಬೆಳೆಗೆ ಯೋಗ್ಯ ಬೆಲೆ ಸಿಗುತ್ತಿಲ್ಲ. ಈ ಬಾರಿ ಮೆಕ್ಕೆಜೋಳ, ಈರುಳ್ಳಿ ಉತ್ಪಾದನೆಯಾಗಿದೆ. ಇದರಿಂದ ಸಾವಿರಾರು ಕೋಟಿ ಆದಾಯ ಸರ್ಕಾರಕ್ಕೆ ಬರುತ್ತದೆ. ಅದರಲ್ಲಿ ಪ್ರೋತ್ಸಾಹ ಧನ ಕೊಡುತ್ತಿಲ್ಲ. ಸರ್ಕಾರ ರೈತರಿಗೆ ಸುಳ್ಳು ಹೇಳಿ ಮೋಸ ಮಾಡುತ್ತಿದೆ. ನಾವೇನು ಮಾಡಿದರೂ ನಡೆಯುತ್ತೆ ಎಂದು ಅವರು ಆಡಿದ್ದೇ ಆಟವಾಗಿದೆ. ರೈತರು ಯಾವುದೇ ಪಕ್ಷಕ್ಕೆ ಸೇರಿದವರಲ್ಲ. ಎಲ್ಲ ಪಕ್ಷಕ್ಕೆ ರೈತರು ಬೇಕು. ರೈತ ವಿರೋಧಿ ಸರ್ಕಾರ ಕಿತ್ತೆಸೆಯುವವರೆಗೆ ಹೋರಾಟ ನಮ್ಮ ನಿಲ್ಲದು. ಹಳ್ಳಿ ಹಳ್ಳಿಗೂ ಹೋರಾಟವನ್ನು ತೆಗೆದುಕೊಂಡು ಹೋಗುತ್ತೇವೆ. ಬೆಳಗಾವಿ ಅಧಿವೇಶನವನ್ನು ರೈತರಿಗಾಗಿ ಮೀಸಲಿಡಬೇಕು ಎಂದು ಆಗ್ರಹಿಸಿದರು.

ಶಿವಾನಂದ ಮಠದ ಮಾತನಾಡಿ, ಕಾಂಗ್ರೆಸ್ ಸರ್ಕಾರ ರೈತ ವಿರೋಧಿ, ಜನವಿರೋಧಿಯಾಗಿದೆ. ರಾಜ್ಯದ ನೀರಾವರಿ ಯೋಜನೆಗಳಿಗೆ ಹಣ ನೀಡುತ್ತಿಲ್ಲ. ಕೇಂದ್ರ ಸರ್ಕಾರದ ಮೇಲೆ ಸುಳ್ಳು ಆರೋಪ ಮಾಡುತ್ತಿದ್ದಾರೆ. ಸರ್ಕಾರದ ವೈಫಲ್ಯ ಮುಚ್ಚಿಕೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರದ ಮೇಲೆ ಗೂಬೆ ಕೂರಿಸುತ್ತಿದ್ದಾರೆ ಎಂದು ದೂರಿದರು.

ಹೋರಾಟದಲ್ಲಿ ಕರಣ ಬಂಡಿ, ಉಮೇಶ್ ಮಲ್ಲಾಪುರ, ಬಾಲಾಜಿರಾವ್ ಭೋಸ್ಲೆ, ಮುತ್ತಣ್ಣ ಕಡಗದ, ಅಶೋಕ್ ನವಲಗುಂದ, ರಾಜೇಂದ್ರ ಘೋರ್ಪಡೆ, ಮಂಜುನಾಥ ಬುರಡಿ, ರೂಪಲೇಶ್ ರಾಠೋಡ್, ಬಿ.ಎಂ. ಸಜ್ಜನರ, ಅಂದಪ್ಪ ಅಂಗಡಿ, ಶಂಕರ, ಭಾಸ್ಕರ್ ರಾಯಬಾಗಿ, ಶಿವಕುಮಾರ ಜಾಧವ, ಚನ್ನು ಪಾಟೀಲ್ ಸೇರಿದಂತೆ ಯುವ ರೈತ ಮುಖಂಡರು, ಬಿಜೆಪಿ ಪಕ್ಷದ ಮುಖಂಡರು, ಹಾಗೂ ತಾಲೂಕಿನ ಗ್ರಾಮೀಣ ಪ್ರದೇಶದ ರೈತರು ಪಾಲ್ಗೊಂಡಿದ್ದರು.

## ಇಂಡೋನೇಷ್ಯಾದಲ್ಲಿ ಭೀಕರ ಪ್ರವಾಹ; ಸಾವಿನ ಸಂಖ್ಯೆ 248ಕ್ಕೆ ಏರಿಕೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸೆನ್ಯಾರ್ ಚಂಡಮಾರುತದ ಪರಿಣಾಮ ಇಂಡೋನೇಷ್ಯಾದಲ್ಲಿ ಭಾರೀ ಮಳೆಯಾಗುತ್ತಿದ್ದು, ಪ್ರವಾಹ– ಭೂಕುಸಿತದಿಂದ ಪ್ರಾಣ ಕಳೆದುಕೊಂಡವರ ಸಂಖ್ಯೆ 248ಕ್ಕೆ ಏರಿಕೆಯಾಗಿದೆ. ರಕ್ಷಣಾ ತಂಡಗಳು ದುರಂತ ಸ್ಥಳಗಳನ್ನು ತಲುಪಲು ಹರಸಾಹಸಪಡುತ್ತಿವೆ. ಇನ್ನೂ ಮಳೆ ಮುಂದುವರಿದರೆ ಮತ್ತು ಅವಶೇಷಗಳಡಿ ಸಿಲುಕಿರುವ ಶವಗಳು ಪತ್ತೆಯಾದರೆ ಮೃತರ ಸಂಖ್ಯೆ ಹೆಚ್ಚಳವಾಗುವ ಸಾಧ್ಯತೆ ಇದೆ ಎಂದು ವರದಿಗಳು ಹೇಳಿವೆ.

ಇಂಡೋನೇಷ್ಯಾದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಸಂಸ್ಥೆ (ಬಿಎನ್‌ಪಿಬಿ) ಶನಿವಾರ, ಈ ವಾರದ ಭೀಕರ ಪ್ರವಾಹ ಮತ್ತು ಭೂಕುಸಿತಗಳಲ್ಲಿ ಸಾವನ್ನಪ್ಪಿದವರ ಸಂಖ್ಯೆ 248 ತಲುಪಿದ್ದು, 100ಕ್ಕೂ ಹೆಚ್ಚು ಜನರು ಇನ್ನೂ ಕಾಣೆಯಾಗಿದ್ದಾರೆ ಎಂದು ತಿಳಿಸಿದೆ. ಪಶ್ಚಿಮ ಸುಮಾತ್ರದ ಆಗಮ್ ಜಿಲ್ಲೆಯಲ್ಲಿ ರಕ್ಷಣಾ ಕಾರ್ಯಕರ್ತರು ಹೆಚ್ಚಿನ ಶವಗಳನ್ನು ಪತ್ತೆ ಹಚ್ಚಿದ ನಂತರ ಈ ಮಾಹಿತಿ ಲಭ್ಯವಾಗಿದೆ ಎಂದು ಸುದ್ದಿ ಸಂಸ್ಥೆ ಅಲ್–ಜಝೀರಾ ವರದಿ ಮಾಡಿದೆ.

500ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಬಿಎನ್‌ಪಿಬಿ ತಿಳಿಸಿದೆ.

“ಸಾವಿನ ಸಂಖ್ಯೆ ಇನ್ನೂ ಹೆಚ್ಚಾಗುವ ಸಾಧ್ಯತೆ ಇದೆ. ಏಕೆಂದರೆ, ಇನ್ನೂ ಅನೇಕ ಶವಗಳು ಪತ್ತೆಯಾಗಿಲ್ಲ ಮತ್ತು ಅನೇಕ ಪ್ರದೇಶಗಳಿಗೆ ರಕ್ಷಣಾ ತಂಡಗಳು ತಲುಪಲು ಸಾಧ್ಯವಾಗಿಲ್ಲ ಎಂದು ಬಿಎನ್‌ಬಿಪಿ ಮುಖ್ಯಸ್ಥ ಸುಹಾರ್ಯಾಂತೊ ಹೇಳಿದ್ದಾರೆ.

ಸುಮಾತ್ರಾ ಪ್ರಾಂತ್ಯದ ಒಟ್ಟು ಸಾವಿನ ಸಂಖ್ಯೆಯ ಮೊದಲ ಅಂದಾಜು 23 ಆಗಿತ್ತು. ಆದರೆ, ಶುಕ್ರವಾರ ರಾತ್ರಿ ಪಶ್ಚಿಮ ಸುಮಾತ್ರಾ ಪ್ರಾದೇಶಿಕ ವಿಪತ್ತು ನಿರ್ವಹಣೆ ಸಂಸ್ಥೆ (ರೀಜನಲ್ ಡಿಸಾಸ್ಟರ್ ಮಿಟಿಗೇಷನ್ ಏಜೆನ್ಸಿ) ವಕ್ತಾರ ಇಲ್ಹಾಮ್ ವಹಾಬ್ ಹೇಳಿದರಂತೆ, ಈಗ 61 ಜನರು ಸತ್ತಿದ್ದಾರೆ ಮತ್ತು 90 ಜನರು ಇನ್ನೂ ಕಾಣೆಯಾಗಿದ್ದಾರೆ.

## ಡಿ. 1ರಂದು ದೊಡ್ಡಾಟ ಪ್ರದರ್ಶನ




■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಹುಯಿಲಗೋಳ ರಸ್ತೆಯ ಶ್ರೀ ಗೌರಿಶಂಕರ ದೇವಸ್ಥಾನದ ಕಾರ್ತಿಕೋತ್ಸವ ಅಂಗವಾಗಿ ಡಿ. 1ರಂದು ರಾತ್ರಿ 8ಕ್ಕೆ ಶ್ರೀ ಮೈಲಾರಲಿಂಗೇಶ್ವರ ಮಹಾತ್ಮೆ ದೊಡ್ಡಾಟ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ ಎಂದು ಸೂತ್ರದಾರ ಅಶೋಕ ಸುತಾರ ಹೇಳಿದರು.

ಶನಿವಾರ ನಗರದ ಪತ್ರಿಕಾಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗೌರಿಗುಡಿ ಜನಪದ ಕಲಾಮೇಳದ ವತಿಯಿಂದ ಶ್ರೀ ಮೈಲಾರಲಿಂಗೇಶ್ವರ ಮಹಾತ್ಮೆ ಅರ್ಥಾತ್ ಮಣಿ ಮಲ್ಲಾಸುರರ ಸಂಹಾರ ಕುರಿತು ದೊಡ್ಡಾಟ ಪ್ರದರ್ಶನ ಜರುಗಲಿದೆ ಎಂದು ಹೇಳಿದರು.

ಕೂಡಲಸಂಗಮ ಧರ್ಮಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಉದ್ಘಾಟಿಸುವರು. ಗೌರಿಗುಡಿ ಓಣಿಯ ವೀರಶೈವ ಸಮಾಜದ ಅಧ್ಯಕ್ಷ ಕಾಶಣ್ಣ ಕುಂದಗೋಳ ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಸೋಮನಗೌಡ ಮಾಲಿಪಾಟೀಲ, ಬಯಲಾಟ ಕಾಡೆಮಿ ಅಧ್ಯಕ್ಷ ಡಾ. ಕೆ.ಆರ್. ದುರ್ಗಾದಾಸ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮುಂತಾದವರು ಪಾಲ್ಗೊಳ್ಳುವರು ಎಂದು ವಿವರಿಸಿದರು.

ಮುಖಂಡ ಸುಭಾಷ ಮಳಗಿ ಮಾತನಾಡಿ, ಉತ್ತರ ಕರ್ನಾಟಕದ ಗಂಡುಮೆಟ್ಟಿನ ದೊಡ್ಡಾಟ ನಶಿಸಿ ಹೋಗುತ್ತಿರುವ ಸಂದರ್ಭದಲ್ಲಿ ದೊಡ್ಡಾಟ ಕಲೆಯನ್ನು ಬೆಳೆಸಿ, ಪ್ರೋತ್ಸಾಹಿಸುವ ಉದ್ದೇಶದಿಂದ ದೊಡ್ಡಾಟ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ದೊಡ್ಡಾಟದ ಎಲ್ಲ ಅಭಿಮಾನಿಗಳು ದೊಡ್ಡಾಟ ಪ್ರದರ್ಶನ ವೀಕ್ಷಿಸಲು ಆಗಮಿಸಿ, ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಸತೀಶ ಕುಂದಗೋಳ, ಶರಣಪ್ಪ ಅಣ್ಣಿಗೇರಿ, ಅಶೋಕ ಸುತಾರ, ಶಿವಾನಂದ ನಾಗರಾಳ, ಉಮೇಶ, ಪ್ರಶಾಂತಕುಮಾರ ಬೆಟಗೇರಿ ಮುಂತಾದವರಿದ್ದರು.

# ಬಸವದಳದ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ನ. 30ರ ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1674ನೇ ಶರಣ ಸಂಗಮದಲ್ಲಿ 'ಬಸವಾದಿ ಶರಣರ ವಚನಗಳಲ್ಲಿ ಜೀವನ ಮೌಲ್ಯ' ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣತತ್ವ ಚಿಂತಕರಾದ ಶರಣೆ ಗೌರಕ್ಕ ಎನ್.ಬಡಿಗಣ್ಣವರ ಉಪನ್ಯಾಸ ಮಾಡುವರು. ಕಾರಣ, ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

# ದಿ. ಶೋಭಾ ಸಂಶಿಮಠರಿಗೆ ಶ್ರದ್ಧಾಂಜಲಿ

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಾಜಿ ಅಧ್ಯಕ್ಷರು ಹಾಗೂ ಗದಗ ಟೀ ಡಿಪೋ ಮಾಲೀಕರಾದ ಎಸ್.ಪಿ. ಸಂಶಿಮಠ ಇವರ ಧರ್ಮಪತ್ನಿ ಶೋಭಾ ಎಸ್.ಸಂಶಿಮಠ ಲಿಂಗೈಕ್ಯರಾಗಿದ್ದು ನೋವನ್ನುಂಟು ಮಾಡಿದೆ. ಅವರ ಅಗಲಿಕೆಯಿಂದ ಸಂಸ್ಥೆಗೆ ತುಂಬಲಾರದ ನಷ್ಟವಾಗಿದ್ದು, ಅವರ ಆತ್ಮಕ್ಕೆ ಪರಮಾತ್ಮನು ಚಿರಶಾಂತಿಯನ್ನು ನೀಡಲಿ ಹಾಗೂ ಸಂಶಿಮಠ ಕುಟುಂಬ ವರ್ಗಕ್ಕೆ ದುಃಖ ಸಹಿಸುವ ಶಕ್ತಿಯನ್ನು ಭಗವಂತನು ನೀಡಲೆಂದು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ನಡೆದ ಶ್ರದ್ಧಾಂಜಲಿ ಸಭೆಯಲ್ಲಿ ಪ್ರಾರ್ಥಿಸಲಾಯಿತು.

ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಎಸ್.ಗುಡಿಮನಿ ವಹಿಸಿ ಮಾತನಾಡಿ, ಒಬ್ಬ ಹಿರಿಯರು ನಮ್ಮನ್ನು ಅಗಲಿರುವುದು ಮನಸ್ಸಿಗೆ ತುಂಬಾ ನೋವುಂಟುಮಾಡಿದೆ. ಪರಮಾತ್ಮನು ಅವರ ಆತ್ಮಕ್ಕೆ ಶಾಂತಿಯನ್ನು ನೀಡಲಿ ಮತ್ತು ಸಂಶಿಮಠ ಕುಟುಂಬ ವರ್ಗಕ್ಕೆ ದುಃಖವನ್ನು ಸಹಿಸುವ ಶಕ್ತಿಯನ್ನು ಭಗವಂತನು ನೀಡಲೆಂದು ಪ್ರಾರ್ಥಿಸಿದರು.

ಸಂಸ್ಥೆಯ ಮಾಜಿ ಅಧ್ಯಕ್ಷ ರಾಮನಗೌಡ ಬಿ.ದಾನಪ್ಪಗೌಡ್ರ, ಉಪಾಧ್ಯಕ್ಷ ಜಯದೇವ ಎಂ.ಮೆಣಸಗಿ ಮಾತನಾಡಿ, ಶೋಭಾ ಎಸ್.ಸಂಶಿಮಠ ಇವರು ಸಂಸ್ಥೆಯ ಮಹಿಳಾ ಘಟಕದ ಉಪಾಧ್ಯಕ್ಷರಾಗಿ ಸೇವೆಯನ್ನು ಮಾಡಿದ್ದಾರೆ. ಅವರ ಅಗಲಿಕೆಯಿಂದ ತುಂಬಲಾರದ ನಷ್ಟವಾಗಿದೆ ಎಂದರು.

ಸಭೆಯಲ್ಲಿ ಸಂಸ್ಥೆಯ ಪದಾಧಿಕಾರಿಗಳು, ಮಾಜಿ ಅಧ್ಯಕ್ಷರು, ಆಡಳಿತ ಮಂಡಳಿ ಹಾಗೂ ಸಂಸ್ಥೆಯ ಮಹಿಳಾ ಘಟಕದ ಪದಾಧಿಕಾರಿಗಳು, ಮಾಜಿ ಅಧ್ಯಕ್ಷರು ಪಾಲ್ಗೊಂಡಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಪ್ರಭಣ್ಣ ಹುಣಸಿಕಟ್ಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭೀಕರ ಅಪಘಾತ : ಇಬ್ಬರು ಮಕ್ಕಳು ಸೇರಿ ಒಂದೇ ಕುಟುಂಬದ ಐವರು ಸಾವು

■ ವಿಜಯಸಾಕ್ಷಿ ಸುದ್ದಿ, ಆಂಧ್ರ ಪ್ರದೇಶ

ಆಂಧ್ರ ಪ್ರದೇಶದ ಕರ್ನೂಲು ಜಿಲ್ಲೆಯ ಯಮ್ಮಿಗನೂರು ಮಂಡಲದ ಕೋಟೆಕಲ್ ಘಾಟ್ ತಿರುವಿನಲ್ಲಿ ಶನಿವಾರ (ನ.29) ಮುಂಜಾನೆ ಎರಡು ಕಾರುಗಳ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಇಬ್ಬರು ಮಕ್ಕಳು ಸೇರಿದಂತೆ ಒಂದೇ ಕುಟುಂಬದ ಐವರು ಸಾವನ್ನಪ್ಪಿದ್ದು, ಇಬ್ಬರು ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾರೆ.

ಬೆಳಗಿನ ಜಾವ 4 ಗಂಟೆಗೆ ಯಮ್ಮಿಗನೂರಿನಿಂದ ಬೆಂಗಳೂರಿಗೆ ತೆರಳುತ್ತಿದ್ದ ಕಾರು ಮತ್ತು ಅದೋನಿಯಿಂದ ಬರುತ್ತಿದ್ದ ಮತ್ತೊಂದು ಕಾರಿನ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿದೆ. ಬೆಳಗಿನ ಜಾವದ ಭಾರೀ ಮಂಜು, ಸರಿಯಾಗಿ ರಸ್ತೆ ಗೋಚರಿಸದಿರುವುದು ಮತ್ತು ಬೆಟ್ಟಗಳ ನಡುವಿನ ಕಠಿಣವಾದ ತಿರುವುಗಳಿಂದಾಗಿ ಎರಡೂ ವಾಹನಗಳ ನಡುವೆ ಅಪಘಾತ ಸಂಭವಿಸಿದೆ ಎಂದು ವರದಿಗಳು ಹೇಳಿವೆ.

ಮೃತರನ್ನು ಕೋಲಾರ ಜಿಲ್ಲೆಯ ಚಿಕ್ಕಹೊಸಳ್ಳಿ ಗ್ರಾಮದ ವೆಂಕಟೇಶಂ (76), ಅವರ ಮಗಳು ಮೀನಾಕ್ಷಿ (32), ಅಳಿಯ ಸತೀಶ್ (34) ಮತ್ತು ಮೊಮ್ಮಕ್ಕಳಾದ ರಿತ್ವಿಕ್ (4) ಮತ್ತು ಬನ್ನಿತ್ (5) ಎಂದು ಗುರುತಿಸಲಾಗಿದೆ.

ಐವರೂ ಸ್ಥಳದಲ್ಲೇ ಸಾವನ್ನಪ್ಪಿದ್ದು, ವೆಂಕಟೇಶಂ ಅವರ ಪತ್ನಿ ಗಂಗಮ್ಮ ಮತ್ತು ಕಾರು ಚಾಲಕ ಸುರೇಶ್ ತೀವ್ರವಾಗಿ ಗಾಯಗೊಂಡಿದ್ದಾರೆ. ಅವರನ್ನು ಯಮ್ಮಿಗನೂರಿನ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಇಬ್ಬರ ಸ್ಥಿತಿಯೂ ಇನ್ನೂ ಗಂಭೀರವಾಗಿದೆ ಎಂದು ವರದಿಗಳು ತಿಳಿಸಿವೆ.

**ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಾಗಿ ಪುನಶ್ಚೇತನ ಕಾರ್ಯಾಗಾರ**

# ಮಕ್ಕಳಲ್ಲಿ ಕಲಿಕೆಯ ಸಂತೋಷವನ್ನು ಮೂಡಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆ ಎಂದರೆ ಅಂಕಗಳನ್ನು ಹೆಚ್ಚಿಸುವ ಮಾತಲ್ಲ. ಅದು ಅವರ ಜೀವನದ ದೃಷ್ಟಿಕೋನವನ್ನು ಬದಲಿಸುವ ದೊಡ್ಡ ಹೊಣೆ. ಶಿಕ್ಷಕರು ಕಲಿಕೆಗೆ ಸ್ಫೂರ್ತಿ ನೀಡಿದಾಗ ಮಾತ್ರ ನಿಜವಾದ ಫಲಿತಾಂಶ ರೂಪುಗೊಳ್ಳುತ್ತದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ.ಶೆಟ್ಟೆಪ್ಪನವರ ಅಭಿಪ್ರಾಯಪಟ್ಟರು.





ನಗರ ವಲಯದಲ್ಲಿ ಎಸ್‌ಎಸ್‌ಎಲ್.ಸಿ ಫಲಿತಾಂಶ ಸುಧಾರಣೆಗಾಗಿ ಶನಿವಾರ ಮಹಾವೀರ ಜೈನ್ ಪ್ರೌಢಶಾಲೆಯಲ್ಲಿ ನಡೆದ ಪುನಶ್ಚೇತನ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಮಕ್ಕಳು ಬದಲಾಗಿರುವ ತಂತ್ರಜ್ಞಾನ ಯುಗದಲ್ಲಿ ಕಲಿಯುತ್ತಿದ್ದಾರೆ. ಪುಸ್ತಕದ ಗಡಿಯಲ್ಲಿರುವ ಕಲಿಕೆ ಅವರಿಗೆ ಸಾಕಾಗುವುದಿಲ್ಲ. ತರಗತಿಯಲ್ಲಿ ಕುತೂಹಲ ಹುಟ್ಟಿಸಿ, ಪ್ರಶ್ನೆ ಕೇಳುವ ಚಟುವಟಿಕೆಯನ್ನು ಉತ್ತೇಜಿಸಿದರೆ ಅವರು ಕಲಿಕೆಯನ್ನು ಪ್ರೀತಿಸಲು ಆರಂಭಿಸುತ್ತಾರೆ. ಕಲಿಕೆ ಪ್ರೀತಿಯಾದಾಗಲೇ ಫಲಿತಾಂಶವೂ ಸುಧಾರಿಸುತ್ತದೆ ಎಂದು ಶಿಕ್ಷಕರಿಗೆ ಸಲಹೆ ನೀಡಿದರು.

ಪ್ರತಿದಿನ 30 ನಿಮಿಷದ ವೈಯಕ್ತಿಕ ಅಭ್ಯಾಸ ವಿದ್ಯಾರ್ಥಿಯ ಕಲಿಕೆಯ ದಿಕ್ಕು ಬದಲಿಸುತ್ತದೆ. ವಿಷಯ ಅರ್ಥವಾಗದ ಮಕ್ಕಳಿಗೆ ಶಿಕ್ಷಕರು ಮನೆಮಂದಿಯಂತೆ ಧೈರ್ಯ ತುಂಬಬೇಕು. ವಿದ್ಯಾರ್ಥಿ ತಪ್ಪು ಮಾಡಿದಾಗ ಗದರಿಸುವ ಬದಲು, ಅವರನ್ನು ಹೇಗೆ ಸರಿಪಡಿಸಬಹುದು ಎಂಬುದನ್ನು ತೋರಿಸಿದರೆ ಆತ್ಮವಿಶ್ವಾಸ ಹೆಚ್ಚುತ್ತದೆ. ಅಂಕಗಳ ಒತ್ತಡಕ್ಕಿಂತ ಕಲಿಕೆಯ ಸಂತೋಷವನ್ನು ಮಕ್ಕಳಲ್ಲಿ ಮೂಡಿಸುವುದು ನಿಜವಾದ ಶಿಕ್ಷಣ. ಈ ವರ್ಷ ಗದಗ ವಲಯದಿಂದ ಅತ್ಯುತ್ತಮ ಫಲಿತಾಂಶ ಬರಬೇಕೆಂಬ ಗುರಿ ಶಿಕ್ಷಕರ ಹೃದಯದಲ್ಲೇ ಹುಟ್ಟಬೇಕು. ಶಿಕ್ಷಕರ ಬದ್ಧತೆ ವಿದ್ಯಾರ್ಥಿಗಳ ಯಶಸ್ಸಿನ ಮೂಲ ಎಂದರು. ಕಾರ್ಯಕ್ರಮದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಪಿ. ಪ್ರಭಯ್ಯನಮಠ, ಶಿಕ್ಷಣ ಸಂಯೋಜಕ ಮುರಳಿ ಸೋಲಾಪುರ ಮತ್ತು ವಿಷಯ ಸಂಪನ್ಮೂಲ ವ್ಯಕ್ತಿಗಳು ತಮ್ಮ ಅನುಭವ ಹಂಚಿಕೊಂಡರು. ಹೊಸ ಕಲಿಕೆ ತಂತ್ರಗಳು, ಪುನರಾವರ್ತನೆ ವಿಧಾನಗಳು, ಪ್ರಶ್ನೆ ಪತ್ರಿಕೆ ವಿಶ್ಲೇಷಣೆ ಮತ್ತು ವಿದ್ಯಾರ್ಥಿ–ಕೇಂದ್ರೀಕೃತ ಅಧ್ಯಯನ ಮಾರ್ಗಗಳನ್ನು ಶಿಕ್ಷಕರಿಗೆ ಪರಿಚಯಿಸಲಾಯಿತು.

ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳಾದ ಶ್ಯಾಮ ಲಾಂಡೆ, ಎಂ.ಎ. ಯರಗುಡಿ, ಶಿಕ್ಷಕರ ಸಂಘದ ಅಧ್ಯಕ್ಷ ಎಸ್.ಎಸ್. ಬಡಿಗೇರ, ಸಂಪನ್ಮೂಲ ವ್ಯಕ್ತಿಗಳಾದ ಸೆಲ್ವ, ಕೆ.ವಿ. ಕೋರಡ್ಡಿ, ಸಿ.ಎಸ್. ಮಾನ್ವಿ, ಬಸವರಾಜ ಕುಂಬಾರ, ಮಹಾಂತೇಶ ವಡವಿ, ನೂರಅಹಮದ್ ನದಾಫ್, ಮಾಲಾ ರಾಮನ್ನವರ, ಶರಣು ಗೌರಿ ಉಪಸ್ಥಿತರಿದ್ದರು. ಎಲ್ಲ ವಿಷಯಗಳ ವಿಷಯ ಶಿಕ್ಷಕರು ಕಾರ್ಯಾಗಾರದಲ್ಲಿ ಭಾಗಿಯಾಗಿ ಸದುಪಯೋಗ ಪಡೆದುಕೊಂಡರು.

> ಪುನಶ್ಚೇತನ ಕಾರ್ಯಾಗಾರದಲ್ಲಿ ಪಾಲ್ಗೊಂಡ ಶಿಕ್ಷಕರು ಶೆಟ್ಟೆಪ್ಪನವರ ಸಂದೇಶದಿಂದ ಪ್ರೇರಿತರಾಗಿ, ಈ ಬಾರಿ ವಿದ್ಯಾರ್ಥಿಗಳಿಗೆ ಇನ್ನಷ್ಟು ಪರಿಣಾಮಕಾರಿ ಬೋಧನೆ ನೀಡುವುದಾಗಿ ಭರವಸೆ ವ್ಯಕ್ತಪಡಿಸಿದರು. ಗದಗ ವಲಯವು ಬದ್ಧತೆಯೊಂದಿಗೆ ಮುಂದಿನ ವರ್ಷದ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ರಾಜ್ಯ ಮಟ್ಟದಲ್ಲಿ ಗುರುತಿಸಿಕೊಳ್ಳುವ ನಿರೀಕ್ಷೆ ಹೆಚ್ಚಾಗಿದೆ.

# ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

2,000 ರೂ. ಜಮಾ ಆಗದ ಗೃಹಲಕ್ಷ್ಮೀ ಫಲಾನುಭವಿಗಳು ಬ್ಯಾಂಕ್, ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಆನ್‌ಲೈನ್ ಸೆಂಟರ್‌ಗಳಲ್ಲಿ NPCI ಲಿಂಕ್ ಮಾಡಿಸಬೇಕು ಎಂದು ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮನವಿ ಮಾಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಗೃಹಲಕ್ಷ್ಮೀ ಫಲಾನುಭವಿಗಳಿಗೆ 2,000 ರೂ. ಬ್ಯಾಂಕ್ ಖಾತೆಗೆ ಜಮಾ ಆಗದೇ ಇರುವ ಫಲಾನುಭವಿಗಳು ತಮ್ಮ ಪಾಸ್‌ಬುಕ್, ಆಧಾರ್ ಕಾರ್ಡ್, ಪಾನ್ ಕಾರ್ಡ್ ತೆಗೆದುಕೊಂಡು ತಮ್ಮ ಖಾತೆ ಇರುವ ಬ್ಯಾಂಕ್ ಇಲ್ಲವೇ ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಆನ್‌ಲೈನ್ ಸೆಂಟರ್‌ಗಳಲ್ಲಿ ಎನ್‌ಸಿಪಿಐ ಲಿಂಕ್ ಮಾಡಿಸಬೇಕು.

ಮಾಹಿತಿಗಾಗಿ ಮುಳಗುಂದ ನಾಕಾ ಬಳಿಯ ಕೆಎಸ್‌ಆರ್‌ಟಿಸಿ ಡಿಪೋ ಎದುರಿಗಿನ ಉಪವಿಭಾಗೀಯ ಕಚೇರಿ ಆವರಣದಲ್ಲಿರುವ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಕಚೇರಿಗೆ ಕಚೇರಿ ಅವಧಿಯಲ್ಲಿ ಭೇಟಿ ನೀಡಬಹುದಾಗಿದೆ.

**ಕರಡು ಮತದಾರರ ಪಟ್ಟಿ ಪ್ರಕಟ**

# ಆಕ್ಷೇಪಣೆ ಸಲ್ಲಿಕೆಗೆ ಡಿ.10 ಕೊನೆಯ ದಿನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಮತದಾರ ಪಟ್ಟಿಗಳ ತಯಾರಿಕೆಗೆ ಭಾರತ ಚುನಾವಣಾ ಆಯೋಗದ ವೇಳಾಪಟ್ಟಿಯಂತೆ 01.11.2025 ಅರ್ಹತಾ ದಿನಾಂಕವುಳ್ಳಂತೆ ಕರಡು ಮತದಾರ ಪಟ್ಟಿಗಳನ್ನು 25.11.2025ರಂದು ಪ್ರಕಟಿಸಲಾಗಿದೆ.

ಒಂದು ಪ್ರತಿಯನ್ನು ಸಂಬಂಧಪಟ್ಟ ಸಹಾಯಕ ಮತದಾರ ನೋಂದಣಾಧಿಕಾರಿಗಳ ಕಾಂ ರ್ಯಾಲಂ ುಗಳಾದ ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ, ಯೋಜನಾ ನಿರ್ದೇಶಕರು, ಡಿಯುಡಿಸಿ–ಗದಗ ಇವರ ಕಚೇರಿ, ಉಪ ನಿರ್ದೇಶನಕರು–ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಗದಗ ಇವರ ಕಚೇರಿ, ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ–ಗದಗ ಇವರ ಕಚೇರಿ, ಗದಗ–ಬೆಟಗೇರಿ ನಗರಸಭೆ ಕಚೇರಿ ಹಾಗೂ ಗದಗ, ಶಿರಹಟ್ಟಿ, ರೋಣ, ಮುಂಡರಗಿ, ಲಕ್ಷ್ಮೇಶ್ವರ, ಗಜೇಂದ್ರಗಡ, ನರಗುಂದದ ತಹಸೀಲ್ದಾರ ಕಚೇರಿಯಲ್ಲಿ ಮತದಾರರ ವೀಕ್ಷಣೆಗೆ ಇಡಲಾಗಿದೆ. ಮುಖ್ಯ ಚುನಾವಣಾಧಿಕಾರಿಗಳ ವೆಬ್‌ಸೈಟ್ www.ceokarnataka.kar.nic.in ಇಲ್ಲಿಯೂ ಪ್ರಕಟಿಸಲಾಗುತ್ತದೆ.

ಪ್ರಕಟಿಸಲಾದ ಕರಡು ಮತದಾರ ಪಟ್ಟಿಗಳಿಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ನವೆಂಬರ್ 25ರಿಂದ ಡಿ. 10ರವರೆಗೂ ಸ್ವೀಕರಿಸಲಾಗುವುದು. ಸ್ವೀಕೃತವಾದ ಅರ್ಜಿಗಳನ್ನು ಡಿ. 25ರೊಳಗೆ ವಿಲೇವಾರಿಗೊಳಿಸಿ, ಅಂತಿಮ ಮತದಾರ ಪಟ್ಟಿಗಳನ್ನು ಡಿ. 30ರಂದು ಪ್ರಕಟಿಸಲಾಗುವುದು.

ನಮೂದಾಗದೇ ಇರುವ ಮತದಾರರು ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸುವ ಅವಧಿಯಲ್ಲಿ ಅರ್ಹ ಪದವೀಧರರು ನಮೂನೆ 18ರೊಂದಿಗೆ ಇತ್ತೀಚಿನ ಭಾವಚಿತ್ರ, ದೃಡೀಕರಿಸಲ್ಪಟ್ಟ ಪದವಿ ಪ್ರಮಾಣಪತ್ರಗಳು ಹಾಗೂ ಸಾಮಾನ್ಯವಾಗಿ ವಾಸಿಸುತ್ತಿರುವ ದಾಖಲೆಗಳನ್ನು ಸಲ್ಲಿಸಿ ಮತದಾರ ಪಟ್ಟಿಗಳಲ್ಲಿ ನೋಂದಾಯಿಸಿಕೊಳ್ಳಲು ಕೋರಿದೆ.

ಪ್ರಕಟಿಸಲಾಗುವ ಕರಡು ಮತದಾರ ಪಟ್ಟಿಗಳಲ್ಲಿ ನ ೂ ೀ ಂ ದ ಣ ಿ ಂ ು ಾ ದ ಮತದಾರರು ತಮ್ಮ ನಮೂದಲ್ಲಿ ಯಾವುದಾದರು ನ್ಯೂನತೆಗಳನ್ನು ಸರಿಪಡಿಸಬೇಕಾಗಿದ್ದಲ್ಲಿ, ಸಂಬಂಧಪಟ್ಟ ಮತದಾರರು ನಮೂನೆ 8ರಲ್ಲಿ ತಿದ್ದುಪಡಿಗಾಗಿ ಹಾಗೂ ಮತದಾರ ಪಟ್ಟಿಯಿಂದ ಹೆಸರು ಕೈಬಿಡಬೇಕಾದಲ್ಲಿ ನಮೂನೆ 7ರಲ್ಲಿ ಅರ್ಜಿಗಳನ್ನು ಸಲ್ಲಿಸಲು ಗದಗ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರದ ಸಹಾಯಕ ಮತದಾರ ನೋಂದಣಾಧಿಕಾರಿ ಸಿ.ಎನ್. ಶ್ರೀಧರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರು ವಕೀಲರನ್ನು ಬದಲಾಯಿಸಿದ್ದಕ್ಕೆ ಮಹಿಳೆಗೆ ಜೈಲು ಶಿಕ್ಷೆ : ತೀರ್ಪು 'ಆಘಾತಕಾರಿ' ಎಂದ ಸುಪ್ರೀಂ ಕೋರ್ಟ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಚೆಕ್ ಬೌನ್ಸ್ ಪ್ರಕರಣದ ಮೇಲ್ಮನವಿ ವಿಚಾರಣೆಗೆ ವೇಳೆ ಆರು ತಿಂಗಳಲ್ಲಿ ಆರು ಬಾರಿ ವಕೀಲರನ್ನು ಬದಲಾಯಿಸಿದ್ದಕ್ಕಾಗಿ ಹರಿಯಾಣದ ಫರಿದಾಬಾದ್ ಸೆಷನ್ಸ್ ಕೋರ್ಟ್‌ನಿಂದ ಜೈಲು ಶಿಕ್ಷೆಗೊಳಗಾದ ಮಹಿಳೆಯನ್ನು ಬಿಡುಗಡೆ ಮಾಡುವಂತೆ ಸುಪ್ರೀಂ ಕೋರ್ಟ್ ನವೆಂಬರ್ 27ರಂದು ಆದೇಶಿಸಿದ್ದು, ಕೆಳ ನ್ಯಾಯಾಲದ ಆದೇಶ 'ಆಘಾತಕಾರಿ' ಎಂದಿದೆ.

ಈ ಪ್ರಕರಣವು ಮಹಿಳೆಯ ತಾಯಿ ನೀಡಿದ ಚೆಕ್‌ಗಳಿಗೆ ಸಂಬಂಧಿಸಿದ್ದು, 7 ಲಕ್ಷ ಮತ್ತು 5.02 ಲಕ್ಷ ರೂ. ಮೌಲ್ಯದ ಚೆಕ್‌ಗಳು ಬೌನ್ಸ್ ಆಗಿತ್ತು. ಈ ಪ್ರಕರಣದಲ್ಲಿ ವಿಚಾರಣಾ ನ್ಯಾಯಾಲಯವು ತಾಯಿ ಮತ್ತು ಮಗಳು ಇಬ್ಬರನ್ನೂ ಅಪರಾಧಿಗಳು ಎಂದು ತೀರ್ಪು ನೀಡಿ ಶಿಕ್ಷೆ ವಿಧಿಸಿತ್ತು ಮತ್ತು ಜಾಮೀನು ಕೊಟ್ಟಿತ್ತು. ವಿಚಾರಣಾ ನ್ಯಾಯಾಲಯ ಜೈಲು ಶಿಕ್ಷೆ ವಿಧಿಸಿದ್ದನ್ನು ಪ್ರಶ್ನಿಸಿ ಮಹಿಳೆ ಫರಿದಾಬಾದ್‌ನ ಸೆಷನ್ಸ್ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಿದ್ದರು. ಈ ಅರ್ಜಿ ವಿಚಾರಣೆ ಎಂಟು ವರ್ಷಗಳಿಂದ ಬಾಕಿ ಉಳಿದಿತ್ತು.

ಈ ನಡುವೆ ಮಹಿಳೆ 6 ತಿಂಗಳಲ್ಲಿ 6 ವಕೀಲರನ್ನು ಬದಲಾಯಿಸಿದ್ದು. ಈ ಕಾರಣಕ್ಕೆ ವಿಚಾರಣೆಗೆ ಅಸಹಕಾರ ಎಂದ ಸೆಷನ್ಸ್ ಕೋರ್ಟ್, ಮಹಿಳೆಗೆ ವಿಚಾರಣಾ ನ್ಯಾಯಾಲಯ ನೀಡಿದ್ದ ಜಾಮೀನು ರದ್ದುಗೊಳಿಸಿ ವಶಕ್ಕೆ ಪಡೆಯಲು ಆದೇಶಿಸಿತ್ತು.

# ಎಚ್.ಸಿ.ಇ.ಎಸ್. ಕಾನೂನು ಮಹಾವಿದ್ಯಾಲಯಕ್ಕೆ ರನ್ನರ್ ಅಪ್ ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಎಚ್.ಸಿ.ಇ.ಎಸ್ ಕಾನೂನು ಮಹಾವಿದ್ಯಾಲಯದ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯ ಕಾನೂನು ಮಹಾವಿದ್ಯಾಲಯದ ಅಡಿಯಲ್ಲಿ ಹುಬ್ಬಳ್ಳಿಯ ಜಿ.ಕೆ. ಕಾನೂನು ಮಹಾವಿದ್ಯಾಲಯ ಆಯೋಜಿಸಿದ್ದ ಅಂತರ್ ಮಹಾವಿದ್ಯಾಲಯಗಳ ಹುಬ್ಬಳ್ಳಿ ವಲಯ ಮಟ್ಟದ ಯುವಜನೋತ್ಸವ ಸ್ಪರ್ಧೆಯಲ್ಲಿ ಭಾಗವಹಿಸಿ ಅತ್ಯುತ್ತಮ ಪ್ರದರ್ಶನ ನೀಡಿ ರನ್ನರ್ ಅಪ್ ಪ್ರಶಸ್ತಿ ಗಳಿಸಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ.

ನಾಟಕ (ಸ್ಕಿಟ್)–ಪ್ರಥಮ, ಜನಪದ ವಾದ್ಯ ಸಂಗೀತ–ಪ್ರಥಮ, ಚಿತ್ರಕಲೆ–ಪ್ರಥಮ, ಕಾರ್ಟೂನಿಂಗ್–ದ್ವಿತೀಯ, ಅನುಕರಣೆ (ಮಿಮಿಕ್ರಿ)–ದ್ವಿತೀಯ ಬಹುಮಾನ ಪಡೆದು ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಆಡಳಿತ ಮಂಡಳಿಯ ಅಧ್ಯಕ್ಷರು, ಪ್ರಾಂಶುಪಾಲರು, ಆಡಳಿತ ವಿಭಾಗ, ಬೋಧಕ–ಬೋಧಕೇತರ ಸಿಬ್ಬಂದಿ ವರ್ಗದವರು ಹೃತ್ಪೂರ್ವಕ ಅಭಿನಂದನೆಗಳನ್ನು ತಿಳಿಸಿದ್ದಾರೆ.

**ಮೇಲ್ಮನವಿ ಸಲ್ಲಿಸಲು ಇದೆ ಅವಕಾಶ: ಡಾ.ಕುಬೇರಪ್ಪ**

# ಆರು ದಿನ ಪೂರೈಸಿದ ಅತಿಥಿ ಉಪನ್ಯಾಸಕರ ಅನಿರ್ದಿಷ್ಟಾವಧಿ ಪ್ರತಿಭಟನೆ





■ ವಿಜಯಸಾಕ್ಷಿ ಸುದ್ದಿ, ಗದಗ

ಶೈಕ್ಷಣಿಕ ಅರ್ಹತೆ ಹೊಂದಿದ ಅತಿಥಿ ಉಪನ್ಯಾಸಕರಿಗೆ ಮಾತ್ರ ನಡೆಸುತ್ತಿರುವ ಆಯ್ಕೆ ಪ್ರಕ್ರಿಯೆಯ ಕೌನ್ಸೆಲಿಂಗ್ ವಿರೋಧಿಸಿ ರಾಜ್ಯ ಅತಿಥಿ ಉಪನ್ಯಾಸಕರ ಸಂಘಟನೆ ನಡೆಸುತ್ತಿರುವ ಅನಿರ್ದಿಷ್ಟಾವಧಿ ಪ್ರತಿಭಟನೆ ಆರು ದಿನ ಪೂರೈಸಿದೆ. ನ್ಯಾಯಯುತ ಬೇಡಿಕೆ ಈಡೇರಿಸಲು ಆಗ್ರಹಿಸಿ ನಡೆಸುತ್ತಿರುವ ಹೋರಾಟ ಬೆಂಬಲಿಸಿ ಅನೇಕ ಸಂಘಟನೆ, ಮುಖಂಡರು ಬೆಂಬಲ ಸೂಚಿಸಿದ್ದಾರೆ.

ಪ್ರತಿಭಟನಾ ಸ್ಥಳಕ್ಕೆ ಶನಿವಾರ ಭೇಟಿ ನೀಡಿದ ವಿಧಾನ ಪರಿಷತ್ ಮಾಜಿ ಸದಸ್ಯ ಡಾ.ಕುಬೇರಪ್ಪ ಅತಿಥಿ ಉಪನ್ಯಾಸಕರ ಹೋರಾಟಕ್ಕೆ ಬೆಂಬಲ ಸೂಚಿಸಿ ಮಾತನಾಡಿ, ಹಿಂದೆ ಇದ್ದ ಶಿಕ್ಷಕರ ಚಳವಳಿಗೆ ಇಂದು ಜೀವಂತಿಕೆ ಇಲ್ಲ. ಹೋರಾಟ ಸೈದ್ಧಾಂತಿಕವಾಗಿ, ಗಟ್ಟಿಯಾಗಿರಬೇಕು ಎಂದರು.

ಪ್ರತಿಭಟನಾನಿರತರು ಯಾವ ಪಕ್ಷದವರನ್ನು ತೆಗಳಬಾರದು. ನ್ಯಾಯಯುತ ಬೇಡಿಕೆ ಈಡೇರಿಸುವಂತೆ ಮನವಿ ಮಾಡಿಕೊಳ್ಳಬೇಕು. ಎಲ್ಲ ಸರಕಾರಗಳು ಶಿಕ್ಷಕರನ್ನು ಒಡೆದು ಆಳುವುದು ಹೊಸತೇನಲ್ಲ. ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಲ್ಲಿ ಉನ್ನತ ಶಿಕ್ಷಣ ಇಲಾಖೆಯ ಅಧಿಕಾರಿಗಳು ಅದನ್ನೇ ಮಾಡುತ್ತಿದ್ದಾರೆ. ಕಾನೂನು ಸಚಿವರು ಅತಿಥಿ ಉಪನ್ಯಾಸಕರ ಅರ್ಹತೆ ವಿಚಾರದಲ್ಲಿ ಬೇಧ ಬೇಡವೆಂದು ನಿರ್ದೇಶಿಸಿದರೂ ಅದನ್ನು ಬದಿಗೊತ್ತಿ ಕೌನ್ಸೆಲಿಂಗ್ ನಡೆಸುತ್ತಿದೆ. ಇದನ್ನು ಪ್ರಶ್ನಿಸಿ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲು ಅವಕಾಶವಿದೆ. ಹೋರಾಡುವ ಮನೋಭಾವ ಗಟ್ಟಿಯಾಗಿರಬೇಕಷ್ಟೇ ಎಂದು ಕರೆ ನೀಡಿದರು. ನಗರದ ಖ್ಯಾತ ವೈದ್ಯ ಡಾ.ಶಿವನಗೌಡ ಮಾತನಾಡಿ, ಅತಿಥಿ ಉಪನ್ಯಾಸಕರಿಂದಲೇ ಪಾಠ ಕೇಳಿದವರು ಇಂದು ಹವಾನಿಯಂತ್ರಿತ ಕೊಠಡಿಯಲ್ಲಿ ಕುಳಿತು ಪಾಠ ಕಲಿಸಿದವರನ್ನೇ ಬೀದಿಗೆ ತಳ್ಳುವ ಹಂತಕ್ಕೆ ಬಂದಿರುವುದು ಸಮಂಜಸವಲ್ಲ. ಹೋರಾಟಕ್ಕೆ ಸಹಮತ ಇದೆ ಎಂದು ತಿಳಿಸಿದರು. ವಕೀಲರು, ವಿದ್ಯಾರ್ಥಿ ಸಂಘಟನೆ ಮುಖಂಡರಾದ ಹಡಪದ ಅವರು ಮಾತನಾಡಿ, ಆಳುವ ಸರಕಾರ ದುಡಿಯುವ ವರ್ಗವನ್ನು ಕನಿಷ್ಠವಾಗಿ ಕಾಣುವುದು ಗೊತ್ತಿರುವ ವಿಚಾರವೇ. ಇಂದು ಮಕ್ಕಳ ಬದುಕು ರೂಪಿಸುವವರ ಜೀವನವೇ ದುರ್ಗಮ ಹಾದಿಗೆ ಬಂದಿರುವುದು ನೋವಿನ ಸಂಗತಿ. ವಿದ್ಯಾರ್ಥಿ ಸಂಘಟನೆಗಳ ಬೆಂಬಲ ಅತಿಥಿ ಉಪನ್ಯಾಸಕರ ಹೋರಾಟಕ್ಕಿದೆ ಎಂದು ಭರವಸೆ ನೀಡಿದರು.

> "ಉನ್ನತ ಶಿಕ್ಷಣ ಇಲಾಖೆ ಸದ್ಯ ನಡೆಸುತ್ತಿರುವ ಕೌನ್ಸೆಲಿಂಗ್‌ನಿಂದ ಯಾರೂ ಭಯಪಡಬಾರದು. ಮೊದಲಿನಂತೆ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆ ನಡೆಯಬೇಕು. ಸೇವಾ ಭದ್ರತೆ ನೀಡಬೇಕು. ಬೇಡಿಕೆಗಳು ಈಡೇರುವವರೆಗೆ ಹೋರಾಟ ನಿಲ್ಲುವುದಿಲ್ಲ."
>
> **– ಡಾ.ಹನುಮಂತಗೌಡ ಕಲ್ಮನಿ**, ರಾಜ್ಯಾಧ್ಯಕ್ಷರು, ಅತಿಥಿ ಉಪನ್ಯಾಸಕರ ಸಂಘಟನೆ.ಬಿಯಸ್ಕೆ

### ಉಡುಪಿ, ರಾಯಚೂರು ಜಿಲ್ಲೆಗಳಿಂದ ಬಂದರು!

ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ನಡೆಯುತ್ತಿರುವ ಅತಿಥಿ ಉಪನ್ಯಾಸಕರ ಹೋರಾಟ ಬೆಂಬಲಿಸಿ, ದೂರದ ಉಡುಪಿ, ರಾಯಚೂರು, ಚಿಕ್ಕಬಳ್ಳಾಪುರ ಸೇರಿದಂತೆ ನಾನ ಜಿಲ್ಲೆಗಳಿಂದ ಅತಿಥಿ ಉಪನ್ಯಾಸಕರು ಆಗಮಿಸಿದ್ದರು. ದೂರದ ಅತಿಥಿಗಳ ವಾಸ್ತವ್ಯಕ್ಕೆ ಸಂಘಟನೆ ವ್ಯವಸ್ಥೆ ಕಲ್ಪಿಸಲಾಯಿತು.



### ಖಿನ್ನತೆಯಿಂದಾಗಿ ಸಾವು!

ಕಳೆದೊಂದು ವರ್ಷದಿಂದ ಕಾರ್ಯಭಾರದ ಕೊರತೆಯಿಂದ ಅತಿಥಿ ಉಪನ್ಯಾಸಕ ಕೆಲಸದಿಂದ ಹೊರಗುಳಿದಿದ್ದ ಮಂಡ್ಯ ಜಿಲ್ಲೆಯ ಮದ್ದೂರಿನ ನಿರ್ವಹಣಾಶಾಸ್ತ್ರ ವಿಭಾಗದ ಅತಿಥಿ ಉಪನ್ಯಾಸಕ ನವೀನ್ ಈಗ ನಡೆಯುತ್ತಿರುವ ಕೌನ್ಸೆಲಿಂಗ್‌ನಿಂದ ಖಿನ್ನತೆಗೊಳಗಾಗಿ ಶನಿವಾರ ಸಾವನ್ನಪ್ಪಿದರು. ಬೈಲಹೊಂಗಲದ ಗ್ರಂಥಾಲಯ ವಿಭಾಗದ ಅತಿಥಿ ಉಪನ್ಯಾಸಕ ಡಾ.ಪರಶುರಾಮ ಹುಲಮನಿ ಸಹ ಶನಿವಾರ ಸಾವನ್ನಪ್ಪಿದ್ದು, ಅಗಲಿದ ಅತಿಥಿ ಉಪನ್ಯಾಸಕರ ಆತ್ಮಕ್ಕೆ ಶಾಂತಿ ಕೋರಿ ಪ್ರತಿಭಟನೆಯಲ್ಲಿ ಸಂತಾಪ ಸೂಚಿಸಲಾಯಿತು.

# ಕೆ.ಎಚ್. ಮುನಿಯಪ್ಪರನ್ನು ಸಿಎಂ ಮಾಡಿ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**



ಕಳೆದ 40 ವರ್ಷಗಳಿಂದ ಕಾಂಗ್ರೆಸ್ ಪಕ್ಷದ ಅಭಿವೃದ್ಧಿಗಾಗಿ ಶ್ರಮಿಸಿ, ಸತತ 7 ಸಲ ಸಂಸದರಾಗಿ ಆಯ್ಕೆಯಾಗಿ ದೀನ-ದಲಿತರ ಏಳ್ಗೆಗಾಗಿ ತಮ ರಾಜಕೀಯ ಜೀವನವನ್ನು ಮುಡಿಪಾಗಿಟ್ಟ ಆಹಾರ ಮತ್ತು ನಾಗರಿಕ ಇಲಾಖೆಯ ಸಚಿವರಾದ ಕೆ.ಎಚ್. ಮುನಿಯಪ್ಪ ಅವರಿಗೆ ಕಾಂಗ್ರೆಸ್ ಹೈಕಮಾಂಡ್ ಮುಖ್ಯಮಂತ್ರಿ ಸ್ಥಾನವನ್ನು ನೀಡಿ ದಲಿತರಿಗೆ ನ್ಯಾಯ ಒದಗಿಸಿಕೊಡಬೇಕೆಂದು ಅಂಬೇಡ್ಕರ ನಗರದ ಮರುಳ ಸಿದ್ದೇಶ್ವರ ಮಠದ ಹುಚ್ಚಯ್ಯ ಮಹಾಸ್ವಾಮಿಗಳು ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಸ್ವಾತಂತ್ರ್ಯದ ನಂತರದ ಕಾಂಗ್ರೆಸ್ ಪಕ್ಷದ ಬೆನ್ನೆಲುಬಾಗಿ ಪಕ್ಷವನ್ನು ಅಧಿಕಾರಕ್ಕೆ ತರಲು ಶ್ರಮಿಸಿದ ದಲಿತ ಸಮುದಾಯಕ್ಕೆ ಮುಖ್ಯಮಂತ್ರಿ ಸ್ಥಾನವು ದೊರೆತಿಲ್ಲ. ಕರ್ನಾಟಕ ರಾಜ್ಯದಲ್ಲಿ ದಲಿತ ಸಮುದಾಯವನ್ನು ಕಟ್ಟಿಕೊಂಡು ಕಾಂಗ್ರೆಸ್ ಸರಕಾರ ಅಧಿಕಾರ ಮಾಡಿದೆ. ಆದರೆ ಇದುವರೆಗೂ ಒಬ್ಬ ದಲಿತರನ್ನೂ ಮುಖ್ಯಮಂತ್ರಿ ಮಾಡದೇ ಇರುವುದು ನೋವಿನ ಸಂಗತಿಯಾಗಿದೆ. ಈಗ ರಾಜ್ಯದಲ್ಲಿ ಸಿ.ಎಂ ಸಿದ್ಧರಾಮಯ್ಯ ಅವರನ್ನು ಬದಲಾವಣೆ ಮಾಡುವ ಬಗ್ಗೆ ಕಾಂಗ್ರೆಸ್ಸಿನಲ್ಲಿ ಚರ್ಚೆಯಾಗುತ್ತಿದೆ. ಸಿ.ಎಂ ಬದಲಾವಣೆ ಮಾಡುವುದೇ ಆದಲ್ಲಿ ದಲಿತರಿಗೆ ಈ ಅವಕಾಶವನ್ನು ಕಲ್ಪಿಸಬೇಕು. ನಮ್ಮ ಮಾದಿಗ ಸಮುದಾಯದ ಹಿರಿಯರು, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರೂ ಆಗಿರುವ ಅಪ್ರತಿಮ ರಾಜ-ಕಾರಣಿ ಕೆ.ಎಚ್. ಮುನಿಯಪ್ಪ ಅವರನ್ನು ಮುಖ್ಯಮಂತ್ರಿ ಸ್ಥಾನಕ್ಕೆ ಕಾಂಗ್ರೆಸ್ ಹೈಕಮಾಂಡ್ ಘೋಷಣೆ ಮಾಡಬೇಕೆಂದು ಹುಚ್ಚಯ್ಯ ಸ್ವಾಮಿಗಳು ಆಗ್ರಹಿಸಿದ್ದಾರೆ.

### ಕಾಂಗ್ರೆಸ್ ಅಡಳಿತದಲ್ಲಿ ಜಿಲ್ಲೆಯಲ್ಲಿ ಪೊಲೀಸರಿಂದ ಗೂಂಡಾವರ್ತನೆ; ಈರಣ್ಣ ವಾಲ್ಮೀಕಿ ಆರೋಪ

# ಪೊಲೀಸ್ ಅಧಿಕಾರಿಗಳ ವರ್ತನೆ ಖಂಡನೀಯ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಸ್ತಿತ್ವಕ್ಕೆ ಬಂದ ನಂತರ ಗದಗ ಜಿಲ್ಲೆಯಲ್ಲಿ ಪೊಲೀಸ್ ಅಧಿಕಾರಿಗಳು ಗೂಂಡಾ ವರ್ತನೆ ನಡೆಸುತ್ತಿದ್ದಾರೆಂದು ಜಿಲ್ಲಾ ಅಟೋ ಸೇನಾದ ಪ್ರಧಾನ ಕಾರ್ಯದರ್ಶಿ ಈರಣ್ಣ ವಾಲ್ಮೀಕಿ ಆರೋಪಿಸಿದರು.




ಶಿರಹಟ್ಟಿ ಪಿಎಸ್ಐ ಈರಣ್ಣ ರಿತ್ತಿ ಗೂಂಡಾ ವರ್ತನೆ ಖಂಡಿಸಿ ಶಿರಹಟ್ಟಿ ತಹಸೀಲ್ದಾರ ಕಚೇರಿ ಮುಂದೆ ಕಳೆದ 6 ದಿನಗಳಿಂದ ವಿವಿಧ ಹಿಂದೂ ಸಂಘಟನೆಗಳ ಕಾರ್ಯಕರ್ತರು ನಡೆಸುತ್ತಿರುವ ಧರಣಿ ಸತ್ಯಾಗ್ರಹ ಶಿಬಿರಕ್ಕೆ ಭೇಟಿ ನೀಡಿ, ಬೆಂಬಲ ವ್ಯಕ್ತಪಡಿಸಿ ಅವರು ಮಾತನಾಡಿದರು.

ಗದಗ ಜಿಲ್ಲೆಯಾದ್ಯಂತ ಪೊಲೀಸ್ ಅಧಿಕಾರಿಗಳ ದುಂಡಾವರ್ತನೆ ಮಿತಿಮೀರಿದೆ. ಪೊಲೀಸ್ ಅಧಿಕಾರಿಗಳು ಮುಗ್ಧ ರೈತರು, ಅಟೋ ಚಾಲಕರು, ಲಾರಿ ಚಾಲಕರನ್ನು ವಿನಾಕಾರಣ ಹಿಡಿದು ಬೆದರಿಸಿ ಸುಳ್ಳು ಪ್ರಕರಣ ದಾಖಲಿಸುತ್ತಿದ್ದಾರೆ. ಈ ಬಗ್ಗೆ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸೇರಿದಂತೆ ವಿವಿಧ ರಾಜಕೀಯ ವ್ಯಕ್ತಿಗಳಿಗೆ ಮಾಹಿತಿಯಿದ್ದರೂ ಸಹ ಸುಮ್ಮನಿದ್ದಾರೆ. ಇದೇ ಪರಿಸ್ಥಿತಿ ಮುಂದುವರೆದಲ್ಲಿ ಜನಸಾಮಾನ್ಯರು, ಬಡವರು, ರೈತರು, ದಲಿತರು ಬೀದಿಗಳಲ್ಲಿ ಸಂಚರಿಸಲು ಸಹ ಪೊಲೀಸರಿಗೆ ಹಣ ನೀಡಬೇಕಾದ ಪರಿಸ್ಥಿತಿ ತಲೆದೋರಲಿದೆಯೆಂದು ಆತಂಕ ವ್ಯಕ್ತಪಡಿಸಿದರು.

ಸರಕಾರ ಕೂಡಲೇ ಜನವಿರೋಧಿ, ಹಿಂದೂ ವಿರೋಧಿ, ರೈತ ವಿರೋಧಿ ನೀತಿ ಅನುಸರಿಸುತ್ತ ಸಮಸ್ತ ಪೊಲೀಸ್ ಇಲಾಖೆಯ ಹೆಸರಿಗೆ ಕಳಂಕ ತರುತ್ತಿರುವ ಪಿಎಸ್ಐ ಈರಣ್ಣ ರಿತ್ತಿ ಅವರನ್ನು ಕೂಡಲೇ ಅಮಾನತುಗೊಳಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಂತೋಷ ಕುರಿ, ಸೋಮಪ್ಪ ಲಮಾಣಿ, ಗಂಗವ್ವ ಲಮಾಣಿ, ಸತೀಶ ಕುಂಬಾರ, ವೆಂಕಟೇಶ ದೊಡ್ಡಮನಿ, ಸಾಗರ ಹುಯಿಲಗೋಳ, ಪಂಚಾಕ್ಷರಿ ಸಾಲಿಮಠ, ಮಂಜುನಾಥ ಪಾಟೀಲ, ಈರಪ್ಪ ಹೆಬಸೂರ, ಶ್ರೀನಿವಾಸ ನಿಂಬಲಗುಂದಿ, ಅಪ್ಪು ದಾಸರ, ಪ್ರವೀಣ ಕೋಳಿ, ಬಸವರಾಜ ಹುಲಕೋಟಿ, ಶರಣಪ್ಪ ನಾಗಾವಿ, ಮಂಜುನಾಥ ಗುಡಿಮನಿ, ಸಚಿನ ಮುಸೂಂಡಿ, ಮುತ್ತು ಪೂಜಾರ, ಶಿವಾನಂದ ಪೂಜಾರ, ಸಿದ್ದಣ್ಣ ಹೆಗಡೆ, ಶರಣಪ್ಪ ಲಕ್ಕುಂಡಿ, ಬಸವರಾಜ ಹುಲ್ಲೂರ, ಸುನೀಲ ಗುಡಿ, ಬಸವರಾಜ ಕೆರಿಕಟ್ಟಿ, ವಾಸು ಕಡೆಮನಿ, ರಾಮು ಹಂಡಿ, ಮಂಜು ಗುಡಿ, ಶಿವಾನಂದ ದಂಡಿನ, ವಿನಾಯಕ ವಾಲ್ಮೀಕಿ, ಪ್ರಶಾಂತ ಬೆಟಗೇರಿ, ಸುರೇಶ ಗೋಡಿ, ಶಶಿಧರ ಗಟ್ಟಿ ಮುಂತಾದವರಿದ್ದರು.

ಮುಗ್ಧ ರೈತ ಸೋಮಪ್ಪ ಲಮಾಣಿ ಮೇಲೆ ಹಲ್ಲೆ ನಡೆಸಿ ಹಣ ವಸೂಲಿ ಮಾಡಿ ಸುಳ್ಳು ಪ್ರಕರಣ ದಾಖಲಿಸಿರುವ ಶಿರಹಟ್ಟಿ ಪಿಎಸ್ಐ ಈರಣ್ಣ ರಿತ್ತಿ ಕಳೆದ ವರ್ಷ ವಿಜಯದಶಮಿಯಂದು ದುರ್ಗಾದೇವಿ ಮೂರ್ತಿಯನ್ನು ವಿಸರ್ಜಿಸಿ ಶಾಂತಿಯುತವಾಗಿ ಮನೆಗೆ ಮರಳುತ್ತಿದ್ದ ಗೋಸಾವಿ ಜನಾಂಗದ ಮಹಿಳೆಯರು, ಯುವಕರ ಮೇಲೆ ಲಾಠಿಯಿಂದ ಹಲ್ಲೆ ನಡೆಸಿದ್ದರು. ಪಿಎಸ್ಐ ಈರಣ್ಣ ರಿತ್ತಿ ನಡೆಸಿದ ಹಲ್ಲೆಯಿಂದ ಅನೇಕ ಮಹಿಳೆಯರು, ಯುವಕರು ಗಾಯಗೊಂಡಿದ್ದರು. ಆ ಸಂದರ್ಭದಲ್ಲಿ ವಿವಿಧ ಹಿಂದೂ ಸಂಘಟನೆಗಳು ನಡೆಸಿದ್ದ ಧರಣಿ ಸತ್ಯಾಗ್ರಹ, ಲಕ್ಷ್ಮೇಶ್ವರ ಬಂದ್‌ಗೂ ಸಹ ತಮ್ಮ ಸಂಘಟನೆಯಿಂದ ಬೆಂಬಲ ನೀಡಲಾಗಿತ್ತೆಂದು ಈರಣ್ಣ ವಾಲ್ಮೀಕಿ ಸ್ಮರಿಸಿದರು.

# ಸಮತಾ ಸೇನಾ ಸಂಘಟನೆಯ ವತಿಯಿಂದ ಸಂವಿಧಾನ ಸಮರ್ಪಣಾ ದಿನಾಚರಣೆ




**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಹುಯಿಲಗೋಳ ನಾರಾಯಣ್ ರಾವ್ (ಟಾಂಗಾ-ಕೂಟ) ವೃತ್ತದಲ್ಲಿ ಸಮತಾ ಸೇನಾ ಗದಗ ಜಿಲ್ಲಾ ವತಿಯಿಂದ ಸಮತಾ ಸೇನಾ ಗದಗ ಜಿಲ್ಲಾಧ್ಯಕ್ಷ ಕಿರಣ ಗಾಮನಗಟ್ಟಿ ನೇತೃತ್ವದಲ್ಲಿ 5ನೇ ವರ್ಷದ ಸಂವಿಧಾನ ಸಮರ್ಪಣಾ ದಿನವನ್ನು ಸಂವಿಧಾನ ಪೀಠಿಕೆ ಓದುವ ಮೂಲಕ ಆಚರಿಸಲಾಯಿತು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸಿದ್ದರು. ಸಮತಾ ಸೇನಾ ರಾಜ್ಯಾಧ್ಯಕ್ಷ ಗುರುನಾಥ ಉಳ್ಳಿಕಾಶಿ, ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಎಸ್.ಎನ್. ಬಳ್ಳಾರಿ, ದಲಿತ ಯುವ ಸೇನಾ ಸಮಿತಿ ಅಧ್ಯಕ್ಷ ವಿಜಯ ಮುಳಗುಂದ, ಹುಬ್ಬಳ್ಳಿ ಲಿಡಕರ್ ಕಾಲೋನಿ ಅಧ್ಯಕ್ಷ ಲೋಹಿತ ಗಾಮನಗಟ್ಟಿ ಸಂವಿಧಾನ ಪೀಠಿಕೆಗೆ ಪುಷ್ಪಾರ್ಪಣೆ ಮಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ರಾಷ್ಟ್ರಪತಿಗಳ ಶ್ಲಾಘನೀಯ ಸೇವಾ ಪದಕ ಪುರಸ್ಕೃತ ಪೊಲೀಸ್ ಅಧಿಕಾರಿ ಮಾರುತಿ ಎಸ್.ಜೋಗದಂಡಕರ, ಕರ್ನಾಟಕ ಕಾನೂನು ವಿಶ್ವವಿದ್ಯಾಲಯ ಹುಬ್ಬಳ್ಳಿಯ ಸಿಂಡಿಕೇಟ್ ಸದಸ್ಯ ಮೋಹನ ಭಜಂತ್ರಿ, ಪೊಲೀಸ್ ಅಧಿಕಾರಿಗಳಾದ ಲಾಲಸಾಬ ಜೂಲಕಟ್ಟಿ, ಗದಗ ಶಹರ ಪೊಲೀಸ್ ಠಾಣೆಯ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ರೇಣುಕಾ ಮುಂಡೇವಾಡಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸಮತಾ ಸೇನಾ ಸಂಘಟನೆಯ ವತಿಯಿಂದ ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಸಮತಾ ಸೇನಾ ಜಿಲ್ಲಾಧ್ಯಕ್ಷ ಕಿರಣ ಗಾಮನಗಟ್ಟಿ ಹಾಗೂ ಗಣ್ಯರಿಂದ ಸರ್ಕಾರಿ ಶಾಲಾ ಮಕ್ಕಳಿಗೆ ನೋಟ್‌ಬುಕ್ ವಿತರಿಸಲಾಯಿತು.

ಈ ಸಂದರ್ಭದಲಿ ಸಮತಾ ಸೇನಾ ಉಪಾಧ್ಯಕ್ಷ ಮಂಜುನಾಥ ಕೊರವರ, ಮುಖಂಡರುಗಳಾದ ಪರಶುರಾಮ ಪೂಜಾರ, ಸತೀಶ ಹೂಲಿ, ರೇವಣಸಿದ್ದಪ್ಪ ಹೊಸಮನಿ, ಬಾಲರಾಜ ಅರಬರ, ಕುಮಾರ ಮಾರನಬಸರಿ, ವೆಂಕಟೇಶ ಬಳ್ಳಾರಿ, ದಶರಥ ಅಗಸಿಮನಿ, ಪ್ರಕಾಶ ಹೊನಕೇರಿ, ಗೋಪಾಲ ಅಗಸಿಮನಿ, ಶ್ರೀಧರ ಅಗಸಿಮನಿ, ವಿಜಯ ಗಾಮನಗಟ್ಟಿ, ಪರಶುರಾಮ ಲಕ್ಕುಂಡಿ, ದುರಗಪ್ಪ ವಿಭೂತಿ, ಪ್ರದೀಪ ಹಾದಿಮನಿ, ವಿನಾಯಕ ಹೊಸಳ್ಳಿ, ರಮೇಶ ಬೇಣಗಿ, ಮಂಜುನಾಥ ದೊಡ್ಡಮನಿ, ಸತೀಶ ಮಂಡಲಗಿರಿ, ಪ್ರಕಾಶ ಉಳ್ಳಿಕಾಶಿ, ಹೊನ್ನಪ್ಪ ಸಾಕಿ, ರಮೇಶ ತೇರದಾಳ, ನಿಂಗಪ್ಪ ತೇರದಾಳ, ಸುರೇಶ ಬೆಳವಡಿ, ರುದ್ರೇಶ ಗಂಗಾವತಿ, ಇಮ್ತಿಯಾಜ್ ಕಳಸಾಪೂರ, ಸಂತೋಷ ಬಣಕಾರ, ಸಂತೋಷ ಕವಲೂರ, ಮಂಜುನಾಥ ಶಹಾಪೂರ, ರೋಹನ್, ಪ್ರವೀಣ, ಅಣ್ಣಪ್ಪ ಉಳ್ಳಿಕಾಶಿ ಮುಂತಾದವರು ಉಪಸ್ಥಿತರಿದ್ದರು.

# ಡಾ. ಸಂಗಮೇಶ ತಮ್ಮನಗೌಡ್ರ ಪ್ರಜ್ಞಾವಂತ ಸಾಹಿತಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬೆಂಗಳೂರಿನ ಸುಚಿತ್ರಾ ಸಿನಿಮಾ ಕಲ್ಚರಲ್ ಹಾಲ್‌ನಲ್ಲಿ ಇತ್ತೀಚೆಗೆ ಶ್ರೀ ಸಾಯಿ ಕಲಾ ಟ್ರಸ್ಟ್ ವತಿಯಿಂದ ನಡೆದ 10ನೇ ವರ್ಷದ ವಾರ್ಷಿಕೋತ್ಸವ ಹಾಗೂ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಲಕ್ಷ್ಮೇಶ್ವರದ ಸೃಜನಶೀಲ ಸಾಹಿತಿ ಡಾ. ಸಂಗಮೇಶ ತಮ್ಮನಗೌಡ್ರ ಅವರ 'ಸಾಧನೆಯ ಸಂತೃಪ್ತರು ಭಾಗ-1' ಕೃತಿಯನ್ನು ಚಲನಚಿತ್ರ ನಟ, ನಿರ್ಮಾಪಕ, ನಿರ್ದೇಶಕರಾದ ಕೃಷ್ಣೇಗೌಡರು ಬಿಡುಗಡೆಗೊಳಿಸಿದರು. 2ನೇ ಕೃತಿಯಾದ 'ಆಧ್ಯಾತ್ಮವಾದಿಯಾಗುತ್ತಿರುವ ಶಿಗ್ಲಿ ಬಸ್ಯಾ' ಕೃತಿಯನ್ನು ರಂಗಭೂಮಿ, ಚಲನಚಿತ್ರ ನಟರಾದ ಮೈಸೂರು ರಮಾಕಾಂತ್ ಅವರು ಬಿಡುಗಡೆಗೊಳಿಸಿದರು.




ಈ ಸಂದರ್ಭದಲ್ಲಿ ಕೃಷ್ಣೇಗೌಡರು ಮಾತನಾಡುತ್ತ, ಇದುವರೆಗೆ 115 ಕೃತಿಗಳನ್ನು ರಚಿಸಿರುವ ಗದಗ ಜಿಲ್ಲೆಯ ಲಕ್ಷ್ಮೇಶ್ವರದ ಸಾಹಿತಿ ಡಾ. ಸಂಗಮೇಶ ತಮ್ಮನಗೌಡ್ರ ಅವರು ಪ್ರಜ್ಞಾವಂತ ಸಾಹಿತಿಯಾಗಿದ್ದು, ಅವರು ಬೆಂಗಳೂರಿನ ಸಾಯಿ ಕಲಾ ಟ್ರಸ್ಟಿನಲ್ಲಿ ಪುಸ್ತಕ ಬಿಡುಗಡೆಗೊಳಿಸುತ್ತಿರುವುದು ಹೆಮ್ಮೆ ಸಂಗತಿಯಾಗಿದೆ ಎಂದರು.

ಮೈಸೂರು ರಮಾಕಾಂತ ಮಾತನಾಡಿ, ಕನ್ನಡ ಸಾಹಿತ್ಯ ಕೃತಿಗಳನ್ನು ಕೊಂಡು ಓದುವವರು ಹೆಚ್ಚಾಗಬೇಕು. ಅಂದಾಗ ಕನ್ನಡ ಸಾಹಿತ್ಯವು ಬೆಳೆಯುತ್ತದೆ. ಡಾ. ಸಂಗಮೇಶ ತಮ್ಮನಗೌಡ್ರ ಅವರು ನಮ್ಮ ನಾಡಿನ ಸೃಜನಾತ್ಮಕ, ಹಿರಿಯ ಸಾಹಿತಿಯಾಗಿದ್ದು, ಅವರ ಸಾಹಿತ್ಯ ಸೇವೆಯು ಬಹುಜನರಿಗೆ ಪ್ರೇರಣೆಯಾಗಿದೆ ಎಂದರು.

ಸುವರ್ಣ ಕರ್ನಾಟಕ ಡಿಜಿಟಲ್ ಮೀಡಿಯಾ ಅಸೋಸಿಯೇಷನ್ ಅಧ್ಯಕ್ಷರಾದ ಗಂಡಸಿ ಸದಾನಂದ, ಚಲನಚಿತ್ರ ನಟರು ನಿರ್ಮಾಪಕರಾದ ಮಹೇಂದ್ರ ಮುನ್ನೋತ್, ರವಿ ಬೆಳಗೆರೆ ಸಾಹಿತ್ಯ ಹಾಗೂ ಸಾಂಸ್ಕೃತಿಕ ಪರಿಷತ್‌ನ ಅಧ್ಯಕ್ಷರಾದ ಯಶೋಮತಿ ರವಿ ಬೆಳಗೆರೆ, ಖ್ಯಾತ ಗಾಯಕರಾದ ಶಶಿಧರ ಕೋಟೆ, ಸಮಾಜಸೇವಕರಾದ ಸುಹೇಲ್ ಖಾನ್, ವಿ.ಬೃಂದಾಶ್ರೀ ಬನವಾಡಿ, ಕಾರ್ಯಕ್ರಮ ಆಯೋಜಕಿ ಸವಿತಾ ಸಿ.ಗೌಡ ಇದ್ದರು.

ಬೆಂಗಳೂರಿನಲ್ಲಿ ಪುಸ್ತಕ ಬಿಡುಗಡೆಯಾದ ಬಗ್ಗೆ ರಾಮಗಿರಿಯ ವರಕವಿ ಡಾ. ದ.ರಾ. ಬೇಂದ್ರೆ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆಯ ಕಾರ್ಯದರ್ಶಿ ಶಂಕ್ರಪ್ಪ ಶಿಳ್ಳಿನ ಹಾಗೂ ಮುಳಗುಂದದ ಸರಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣುಮಕ್ಕಳ ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷರಾದ ಮಹಾಂತೇಶ ಕಣವಿ ಮತ್ತು ಶಾಲಾ ಶಿಕ್ಷಕ ಸಿಬ್ಬಂದಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

### ಬಸವ ಯೋಗ ಮಂದಿರದಲ್ಲಿ ಸಂವಿಧಾನ ದಿನಾಚರಣೆ

# ಭಾರತದ ಸಂವಿಧಾನವನ್ನು ಅರಿತು ಆಚರಿಸಿ




**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ನಾಗರಿಕರೆಲ್ಲರಿಗೂ ಭಾರತ ಸಂವಿಧಾನವು ಸಾಮಾಜಿಕ, ಆರ್ಥಿಕ, ರಾಜಕೀಯ, ಧಾರ್ಮಿಕ ಸ್ವಾತಂತ್ರ್ಯ ನೀಡಿದೆ. ಜೊತೆಗೆ ವ್ಯಕ್ತಿ ಗೌರವ, ಸ್ಥಾನಮಾನ, ಅವಕಾಶಗಳ ಸಮಾನತೆ ದೊರೆಯುವಂತೆ ಮಾಡಿದೆ ಮತ್ತು ನಮ್ಮ ಹಕ್ಕು, ಕರ್ತವ್ಯಗಳನ್ನು ತಿಳಿಸಿದೆ. ಸಂವಿಧಾನದ ಈ ಎಲ್ಲ ಅಂಶಗಳನ್ನು ನಾವೆಲ್ಲರೂ ಅರಿತು ಆಚರಿಸಿದ್ದಾದರೆ ನಮ್ಮೆಲ್ಲರಲ್ಲಿ ಭ್ರಾತೃತ್ವ, ಸಮಾನತೆ, ಸಹಕಾರ ಭಾವಗಳು ಬೆಳೆದು ಸಮಾಜದಲ್ಲಿ ಏಕತೆ ಬರಲು ಸಾಧ್ಯವಾಗುವುದು. ಈ ಹಿನ್ನೆಲೆಯಲ್ಲಿ ಭಾರತದ ಸಂವಿಧಾನ ಅರಿತು ಆಚರಿಸಿದರೆ ಸುಂದರ ಸಮಾಜ ನಿರ್ಮಾಣಗೊಳ್ಳಲು ಸಾಧ್ಯವಾಗುವದೆಂದು ರೋಣ ಆರ್.ಜಿ.ಇ. ಸಂಸ್ಥೆಯ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ ಹಾಗೂ ಸ್ನಾತಕೋತ್ತರ ಕೇಂದ್ರದ ಪ್ರಾಚಾರ್ಯರು ಹಾಗೂ ಮುಖ್ಯ ವೈದ್ಯಾಧಿಕಾರಿಗಳಾದ ಡಾ. ಆರ್.ಬಿ. ಕೊಟ್ಟೂರಶೆಟ್ಟಿ ಅಭಿಪ್ರಾಯಪಟ್ಟರು.

ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಇವರುಗಳ ಸಂಯುಕ್ತಾಶ್ರಯದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆದ ಸಂವಿಧಾನ ದಿನಾಚರಣೆ ಮತ್ತು 101ನೇ ಮಾಸಿಕ ವಚನ ಶ್ರವಣ ಹಾಗೂ ಕನ್ನಡ ರಾಜ್ಯೋತ್ಸವ ಸಂಭ್ರಮ ಸಮಾರಂಭದ ಮುಖ್ಯ ಅತಿಥಿಗಳಾಗಿ ಪಾಲೊಂಡು ಅವರು ಮಾತನಾಡಿದರು.

ನಿವೃತ್ತ ಶಿಕ್ಷಕ ಬಿ.ಕೆ. ನಿಂಬನಗೌಡರ ಮಾತನಾಡಿ, ಸಂವಿಧಾನದ ಗುರಿ, ಉದ್ದೇಶಗಳು ಮತ್ತು ಶರಣರ ವಚನ ತತ್ವಾಚರಣೆಗಳು ಒಂದು ನಾಣ್ಯದ ಎರಡು ಮುಖಗಳಾಗಿವೆ. ಯಾವುದಾದರೂ ಮುಖದರ್ಶನ ಮಾರ್ಗದಲ್ಲಿ ನಡೆದರೂ ಸದೃಢ, ಸಶಕ್ತ ನಾಡು ನಮ್ಮದಾಗುವದು ಎಂದರು.

ಕಾರ್ಯಕ್ರಮಗಳ ಅಧ್ಯಕ್ಷತೆ ವಹಿಸಿದ ನಿವೃತ್ತ ಕೃಷಿ ವಿಜ್ಞಾನಿ ಡಾ. ಎಸ್.ಕೆ. ನಾಲತ್ವಾಡಮಠ ಮಾತನಾಡಿ, ಭಾರತ ಸಂವಿಧಾನ ಸಾಮಾಜಿಕವಾಗಿ ನಮಗೆ ಧರ್ಮ ಗ್ರಂಥವಾಗಬೇಕು. ಅದರಲ್ಲಿ ತಿಳಿಸಿದ ವಿಷಯಗಳ ಪರಿಪಾಲನೆಗೆ ಶರಣರ ವಚನಗಳು ಪೂರಕವಾಗಿವೆ ಎಂದರು.

ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ ಉಪಸ್ಥಿತರಿದ್ದರು. ಸಭಿಕರ ಪರವಾಗಿ ನಿವೃತ್ತ ಶಿಕ್ಷಕರಾದ ಜಿ.ಪಿ. ಕಟ್ಟಿಮನಿ ಮಾತನಾಡಿದರೆ, ವೀಣಾಶ್ರೀ ಮಾಲಿಪಾಟೀಲ, ಲಲಿತಾ ಕಡಗದ ಕನ್ನಡ ಗೀತೆ ಹಾಡಿದರು. ನವೀನ ಪಲ್ಲೇದ ವಚನ ಹೇಳಿದರು.

ಕಾರ್ಯಕ್ರಮದಲ್ಲಿ ಏಷಿಯಾನೆಟ್ ಸುವರ್ಣ ನ್ಯೂಸ್ ನೀಡುವ 'ಆಯುರ್ ಭೂಷಣ-2025' ಪ್ರಶಸ್ತಿ ಪಡೆದ ನಿಮಿತ್ತ ಡಾ. ಆಯ್.ಬಿ. ಕೊಟ್ಟೂರಶೆಟ್ಟಿ ಮತ್ತು ಇತ್ತೀಚೆಗೆ ಶಿಕ್ಷಕ ವೃತ್ತಿಯಿಂದ ನಿವೃತ್ತರಾದ ಬಿ.ಕೆ. ನಿಂಬನಗೌಡರ ಗುರುಗಳನ್ನು ಸನ್ಮಾನಿಸಲಾಯಿತು.

ಸಮಾರಂಭದಲ್ಲಿ ಬೂದಪ್ಪ ಅಂಗಡಿ, ಮಂಜುನಾಥ ಅಳಗಿ, ಎಸ್.ಎಂ. ಬುರಡಿ, ಪ್ರಶಾಂತ ಇ.ಎಲ್, ವಿಜಯಲಕ್ಷ್ಮೀ ಉಪವಾಸಿ, ಸುಲೋಚನಾ ಐಹೊಳ್ಳಿ, ಕವಿತಾ ಮರಿಗೌಡರ, ಪಾರ್ವತಿ ಭೂಮಾ, ವಿಜಯಾ ಚನ್ನಶೆಟ್ಟಿ, ಸುನಂದಾ ಅರಹುಣಸಿ, ಗಿರಿಜಾ ಅಂಗಡಿ, ವಿಜಯಲಕ್ಷ್ಮೀ ಮೇಕಳಿ ಮುಂತಾದವರು ಉಪಸ್ಥಿತರಿದ್ದರು.

ಗಿರಿಜಾ ನಾಲತ್ವಾಡಮಠ ವಚನ ಪ್ರಾರ್ಥನೆ ಹೇಳಿದರು. ಶಾಂತಾ ಮುಂದಿನಮನಿ ಸಂವಿಧಾನ ಪೀಠಿಕೆ ಬೋಧಿಸಿದರು. ಡಾ. ಎಂ.ವಿ. ಐಹೊಳ್ಳಿ ಸ್ವಾಗತ ಕೋರಿದರು. ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಪ್ರಸ್ತಾವಿಕ ನುಡಿ ತಿಳಿಸಿದರು. ಶಿವಾನಂದ ಗಿಡ್ಡಕೆಂಚಣ್ಣವರ ಕಾರ್ಯಕ್ರಮ ನಿರೂಪಿಸಿದರು. ಬಸವರಾಜ ತೆ-ಋಟಗೇರ ವಂದಿಸಿದರು. ಅರುಣಾ ಇಂಗಳಳ್ಳಿ ಪ್ರಸಾದ ಸೇವೆ ಸಲ್ಲಿಸಿದರು. ಗೌರಿ ಜೀರಂಕಳಿ ಮಂಗಲ ಗೀತೆ ಹೇಳಿದರು.

ಉಪನ್ಯಾಸಕರಾಗಿ ಆಗಮಿಸಿದ ಶಿವನಗೌಡ ಬಿ.ಗೌಡರ ಮಾತನಾಡಿ, ಇಂದು ಕನ್ನಡ ಭಾಷೆ ಸಾರ್ವತ್ರಿಕವಾಗಿ, ಸಾರ್ವಜನಿಕವಾಗಿ, ಸರಕಾರಿ ಮತ್ತು ಖಾಸಗಿ ವಲಯಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬಳಕೆಯಾಗಬೇಕಾಗಿದೆ. ಅದಕ್ಕಾಗಿ ಮನೆಯಲ್ಲಿ ಮಕ್ಕಳಿಗೆ ಪಾಲಕರು, ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಕರು, ಕಚೇರಿಗಳಲ್ಲಿ ಸಿಬ್ಬಂದಿ ವರ್ಗದವರಿಗೆ ಅಧಿಕಾರಿಗಳು ಕನ್ನಡ ಬಳಕೆ ಬಗ್ಗೆ ಅಭಿಮಾನ ಮೂಡಿಸಬೇಕಾಗಿದೆ ಎಂದು ಹೇಳಿದರು.

# ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿಯಿಲ್ಲ




**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ರೈತರ ಹಿತ ಕಾಪಾಡುವುದು ಎಲ್ಲಾ ಪಕ್ಷಗಳ ಜವಾಬ್ದಾರಿಯಾಗಿದೆ. ಆದ್ದರಿಂದ ಸೈದ್ಧಾಂತಿಕ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ರೈತರಿಗೆ ಬೆಂಬಲ ಬೆಲೆ ಒದಗಿಸುವಂತೆ ಒತ್ತಾಯಿಸಿ ಹೋರಾಟ ಮಾಡೋಣ ಎಂದು ಅಖಿಲ ಭಾರತ ಕಿಸಾನ್ ಸಭಾ ಜಿಲ್ಲಾಧ್ಯಕ್ಷ ಗುಡಿಹಳ್ಳಿ ಹಾಲೇಶ್ ತಿಳಿಸಿದರು.

ಹರಪನಹಳ್ಳಿ ನಗರದ ಪ್ರವಾಸಿ ಮಂದಿರದಲ್ಲಿ ಬಿಜೆಪಿ, ಅಖಿಲ ಭಾರತ ಕಿಸಾನ್ ಸಭಾ, ಕರ್ನಾಟಕ ಪ್ರಾಂತ ರೈತ ಸಂಘ, ಡಿಎಸ್‌ಎಸ್ (ಭೀಮವಾದ) ಸೇರಿ ವಿವಿಧ ಸಂಘಟನೆಗಳಿಂದ ಡಿ. 1ರಂದು ರಾಜ್ಯಾದ್ಯಂತ ನಡೆಯಲಿರುವ ಹೋರಾಟದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ರೈತರ ಬೆಳೆಗಳಿಗೆ ಸಮರ್ಪಕ ಬೆಲೆ ನಿಗದಿ ಮಾಡುವ ಬದಲು ರಾಜ್ಯದಲ್ಲಿ ಆಡಳಿತ ಪಕ್ಷವು ಮುಖ್ಯಮಂತ್ರಿ ಗದ್ದುಗೆಯ ಗುದ್ದಾಟದಲ್ಲಿ ತಲ್ಲೀನವಾಗಿದೆ. ಅವರಿಗೆ ರೈತರ ಪರ ಯಾವುದೇ ಕಾಳಜಿಯಿಲ್ಲವೆಂದು ಟೀಕಿಸಿದರು.

ಬಿಜೆಪಿ ಮಂಡಲ ಅಧ್ಯಕ್ಷ ಶೇಖರಪ್ಪ ಮಾತನಾಡಿ, ಅತಿವೃಷ್ಟಿಯಿಂದ ರಾಜ್ಯದಲ್ಲಿ ರೈತರ ಬದುಕು ಅಸಹನೀಯ ಸ್ಥಿತಿಯಲ್ಲಿದೆ. ಉಳಿದ ಬೆಳೆಯನ್ನು ಮಾರಾಟ ಮಾಡಲು ಹೋದರೆ ಮಧ್ಯವರ್ತಿಗಳ ಹಾವಳಿಗೆ ರೈತನು ನಲುಗಿ ಹೋಗಿದ್ದಾನೆ. ಮುಂಗಾರಿನ ಬೆಳೆಗೆ ಮಾತ್ರ ಸಮೀಕ್ಷೆ ಮಾಡಲಾಗುತ್ತಿದೆ. ಸರ್ಕಾರವು ಹಿಂಗಾರು ಬೆಳೆಗೂ ಸಮೀಕ್ಷೆ ಕೈಗೊಂಡು ಅರ್ಹ ಫಲಾನುಭವಿಗಳಿಗೆ ಬೆಳೆ ಪರಿಹಾರ ಒದಗಿಸಬೇಕು ಎಂದರು.

ಬಿಜೆಪಿ ಮುಖಂಡ ಆರ್.ಲೋಕೇಶ್ ಮಾತನಾಡಿ, ಡಿ. 1ರಂದು ನಡೆಯಲಿರುವ ಪ್ರತಿಭಟನೆಯಲ್ಲಿ ತಾಲೂಕಿನ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿಭಟನೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಈ ವೇಳೆ ಬಿಜೆಪಿ ಮಂಡಲ ಅಧ್ಯಕ್ಷ ಶೇಖರಪ್ಪ, ಪ್ರಧಾನ ಕಾರ್ಯದರ್ಶಿ ಎನ್.ಜಿ. ಸಿದ್ದೇಶ್, ಪುರಸಭೆ ಮಾಜಿ ಅಧ್ಯಕ್ಷ ಮೆಹಬೂಬ್ ಸಾಬ್, ಮಂಡಲ ಉಪಾಧ್ಯಕ್ಷ ಬಸವನಗೌಡ, ಗಂಗಾನಾಯ್ಕ, ಸಹ ಕಾರ್ಯದರ್ಶಿ ಮತ್ತಿಹಳ್ಳಿ ಕೆಂಚಪ್ಪ, ಪ್ರಸನ್ನ, ನಗರಸಭೆ ಸದಸ್ಯರಾದ ಕಿರಣ್ ಶಾನಭಾಗ, ತರಕಾರಿ ಹನುಮಂತಪ್ಪ, ಕೌಟಿ ವಾಗೀಶ್, ಜಾವೀದ್, ಮಲ್ಲೇಶ್, ಗೌರಿಹಳ್ಳಿ ಬಸವರಾಜ್, ಪೂಜಾರ್ ಮಹೇಶ್, ಹೊಸಹಳ್ಳಿ ಮಲ್ಲೇಶ್, ಹುಲಿಕಟ್ಟಿ ರಾಜಪ್ಪ, ಕೆ. ಸುಭಾಷ್ ಮುಂತಾದವರಿದ್ದರು.

## ನಿಧನ

### ಶಂಕರಸಾ ಶಿದ್ಲಿಂಗ



ಗದಗ: ನಗರದ ತ್ರಿಕೋಟೇಶ್ವರ ದೇವಸ್ಥಾನ ಹತ್ತಿರದ ದಾಸರ ಓಣಿಯ ನಿವಾಸಿ ಶಂಕರಸಾ ಏಕನಾಥಸಾ ಶಿದ್ಲಿಂಗ (53) ದಿ.29 ರಂದು ಶನಿವಾರ ಸಾಯಂಕಾಲ 6:30ಕ್ಕೆ ನಿಧನರಾಧರು.

ಮೃತರು ಪತ್ನಿ, ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂದು-ಬಳಗ ಅಗಲಿದ್ದಾರೆ.

ಮೃತರ ಅಂತಿಮ ಯಾತ್ರೆಯು ದಿ.30 ರಂದು ರವಿವಾರ ಬೆಳಿಗ್ಗೆ 10:30 ಗಂಟೆಗೆ ಮೃತರ ಸ್ವಗ್ರಹದಿಂದ ಹೊರಡುವದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಅಂ. ಬೀಳಗಿ ಮಾತೃಹೃದಯದ ಅಪರೂಪದ ವ್ಯಕ್ತಿ

▶▶ಮೊದಲನೇ ಪುಟದಿಂದ

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಶಿಷ್ಟಾಚಾರ ತಹಸೀಲ್ದಾರ ಪ್ರಭಾಕರ ಭಟ್, ಧಾರವಾಡ ತಹಸೀಲ್ದಾರ ಕಚೇರಿ ಶಿರಸ್ತೇದಾರ ರಮೇಶ ಬಂಡಿ, ನೌಕರ ಸಂಘದ ಜಿಲ್ಲಾ ಗೌರವಾಧ್ಯಕ್ಷ ಪ್ರಕಾಶ ಹಳಪೇಟ, ಜಿ.ಪಂ ಸಹಾಯಕ ಕಾರ್ಯದರ್ಶಿ ಅಜಯ ಎನ್, ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯಕ ನಿರ್ದೇಶಕ ರಾಜಶೇಖರ ಕಂಟೆಪ್ಪಗೌಡ್ರ, ಶಿರಸ್ತೇದಾರ ಶಿವಕುಮಾರ ಮೇಟಿ, ಜಿಲ್ಲಾಧಿಕಾರಿಗಳ ಆಪ್ತ ಸಹಾಯಕ ಸಾಗರ ಫಡ್ನಿಸ್, ನೌಕರರ ಸಂಘದ ಪದಾಧಿಕಾರಿಗಳಾದ ನಂದೀಶ ಟಿ.ಖಾಕಂಡಕಿ, ರಾಜಶೇಖರ ಹೊನ್ನಪ್ಪನವರ, ಎನ್.ಎಸ್. ಕಮ್ಮಾರ, ಸೋಮು ಅಗಸಿಮನಿ, ಸಂಗಮೇಶ ಭಾವಿಕಟ್ಟಿ, ಆತ್ಮಾನಂದ ಸತ್ಯನ್ನವರ, ಅಮಿತ ಕಲ್ಯಾಣಶಟ್ಟರ, ಸಿ.ಸಿ. ಹಿರೇಮಠ, ಶಿಕ್ಷಕರಾದ ಸಿದ್ದು ಪಿ.ಹಿರೇಮಠ, ವಿನಾಯಕ ಬಿಸಲಹಳ್ಳಿ ಸೇರಿದಂತೆ ವಿವಿಧ ಇಲಾಖೆಗಳ ಸಿಬ್ಬಂದಿಗಳು ಪಾಲ್ಗೊಂಡು ನುಡಿನಮನ ಸಲ್ಲಿಸಿದರು.

# ಮುಂಬೈ ಪಾಲಿಕೆ ಚುನಾವಣೆಯ ಕರಡು ಪಟ್ಟಿಯಲ್ಲಿ 11 ಲಕ್ಷ ನಕಲಿ ಮತದಾರರಿದ್ದಾರೆ : ಕಾಂಗ್ರೆಸ್ ಆರೋಪ

**■ವಿಜಯಸಾಕ್ಷಿ ಸುದ್ದಿ, ಮುಂಬೈ**

ಮುಂಬೈ ಮಹಾನಗರ ಪಾಲಿಕೆ ಚುನಾವಣೆಗೆ ಬಿಡುಗಡೆ ಮಾಡಲಾದ ಕರಡು ಮತದಾರರ ಪಟ್ಟಿಯಲ್ಲಿ 11 ಲಕ್ಷ ನಕಲಿ ಮತದಾರರಿದ್ದಾರೆ ಎಂದು ಕಾಂಗ್ರೆಸ್‌ನ ಮುಂಬೈ ಘಟಕ ಶುಕ್ರವಾರ (ನ.28) ಆರೋಪಿಸಿದ್ದು, ಪಟ್ಟಿಯನ್ನು ಸಾರ್ವಜನಿಕಗೊಳಿಸಬೇಕೆಂದು ಒತ್ತಾಯಿಸಿದೆ ಎಂದು ದಿ ಹಿಂದೂ ವರದಿ ಮಾಡಿದೆ.

ಮುಂಬೈ ಉತ್ತರ ಕೇಂದ್ರವನ್ನು ಪ್ರತಿನಿಧಿಸುವ ಲೋಕಸಭಾ ಸಂಸದೆ ಮತ್ತು ಮುಂಬೈ ಕಾಂಗ್ರೆಸ್ ಮುಖ್ಯಸ್ಥೆ ವರ್ಷಾ ಗಾಯಕ್ವಾಡ್ ನೇತೃತ್ವದ ವಿರೋಧ ಪಕ್ಷದ ಸದಸ್ಯರ ನಿಯೋಗವು ರಾಜ್ಯ ಚುನಾವಣಾ ಆಯುಕ್ತರನ್ನು ಭೇಟಿ ಮಾಡಿ ಈ ಕುರಿತು ತಕ್ಷಣದ ಸ್ಪಷ್ಟೀಕರಣವನ್ನು ಕೋರಿದೆ ಎಂದು ವರದಿ ಹೇಳಿದೆ.

**ಹಾಳಾಗುತ್ತಿರುವ ಗೋವಿನಜೋಳದ ತೆನೆಗಳನ್ನು ರಸ್ತೆಗೆ ಚೆಲ್ಲಿ ಅಕ್ರೋಶ ವ್ಯಕ್ತಪಡಿಸಿದ ರೈತರು**

# ರೈತರ ಸಹನೆ ಮೀತಿ ಮೀರುತ್ತಿದೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕಳೆದ 15 ದಿನಗಳಿಂದ ಮೆಕ್ಕೆಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರಕ್ಕಾಗಿ ಸಮಗ್ರ ರೈತ ಸಂಘಟನೆಗಳ ಒಕ್ಕೂಟ ಮತ್ತು ಅನೇಕ ಸಂಘಟನೆಗಳು ನಡೆಸುತ್ತಿರುವ ಅಹೋರಾತ್ರಿ ಧರಣಿ ಸತ್ಯಾಗ್ರಹ ವೇದಿಕೆಯಿಂದ ಶನಿವಾರ ಹಾಳಾಗುತ್ತಿರುವ ಗೋವಿನಜೋಳದ ತೆನೆಗಳನ್ನು ರಸ್ತೆಗೆ ಚೆಲ್ಲಿ ರೈತರು ಸರಕಾರದ ವಿರುದ್ಧ ಅಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಸಮಗ್ರ ರೈತ ಸಂಘಟನೆಗಳ ಒಕ್ಕೂಟ ಮಂಜುನಾಥ ಮಾಗಡಿ, ರೈತರು ಬೆಳೆದ ಗೋವಿನಜೋಳ ಹಾಳಾಗುತ್ತಿದ್ದು, ರೈತರ ಸಹನೆ ಮೀತಿ ಮೀರುತ್ತಿದೆ. ಕಷ್ಟದಲ್ಲಿರುವ ರೈತರು ತಮ್ಮ ಬದುಕಿನ ಬಂಡಿ ಸಾಗಿಸಲು ಕಡಿಮೆ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ. ಇನ್ನೆರಡು ದಿನಗಳಲ್ಲಿ ಖರೀದಿ ಕೇಂದ್ರ ಆರಂಭವಾಗದಿದ್ದರೆ ಎತ್ತು-ಚಕ್ಕಡಿಯೊಂದಿಗೆ ರಾಜ್ಯ ಹೆದ್ದಾರಿ ಬಂದ್ ಮಾಡಿ ದೊಡ್ಡಮಟ್ಟದ ಹೋರಾಕ್ಕಿಳಿಯುತ್ತೇವೆ. ರೈತರ ಹೋರಾಟ ತೀವ್ರ ಸ್ವರೂಪ ಪಡೆದು ಸರ್ಕಾರಕ್ಕೆ ಬಿಸಿ ಮುಟ್ಟಿದ ಸಂದರ್ಭದಲ್ಲಿ ನ. 21ರಂದು ಸರ್ಕಾರ ಗೋವಿನಜೋಳ ಖರೀದಿ ಕೇಂದ್ರ ಪ್ರಾರಂಭಿಸುವ ಭರವಸೆ ನೀಡಿತ್ತು. 8 ದಿನ ಕಳೆದರೂ ಖರೀದಿ ಖರೀದಿ ಕೇಂದ್ರ ಪ್ರಾರಂಭಿಸಿಲ್ಲ. ರೈತರ ಸಹನೆಯ ಕಟ್ಟೆಯೊಡೆಯುವ ಮೊದಲೇ ಎಚ್ಚೆತ್ತುಕೊಳ್ಳಬೇಕು ಎಂದರು.

> ಕಿಸಾನ ಜಾಗೃತಿ ವಿಕಾಸ ಸಂಘದ ಜಿಲ್ಲಾಧ್ಯಕ್ಷ ನಿಂಗಪ್ಪ ಭಂಡಾರಿ, ಮುಂಡರಗಿ ಘಟಕದ ವಿಶ್ವನಾಥ ತಾಮ್ರಗುಂಡಿ ಮಾತನಾಡಿ, ಸರಕಾರದ ಗದ್ದುಗೆ ಗುದ್ದಾಟದಲ್ಲಿ ರೈತರ ಕಷ್ಟಕ್ಕೆ ಸ್ಪಂದಿಸುವ ಮನಸ್ಥಿತಿಯಲ್ಲಿಲ್ಲ. ಪಕ್ಷಕ್ಕಾಗಿ ದುಡಿದಿದ್ದೇನೆ ಕೂಲಿ ಕೊಡಿ ಎಂದು ಕೇಳುವ ಇವರಿಗೆ ರೈತರು ವರ್ಷವಿಡೀ ಕಷ್ಟಪಟ್ಟು ಬೆಳೆದ ಬೆಳೆಗೆ ಯೋಗ್ಯ ಬೆಲೆ ಕೊಡಿಸುವ ಕಾಳಜಿ ಇಲ್ಲ. ರಾಜ್ಯ ಸರಕಾರ ಕಿವುಡ, ಮೂಕ ಹಾಗೂ ಕಣ್ಣಿದ್ದು ಕುರುಡರಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಆದ್ರಳ್ಳಿಯ ಶ್ರೀ ಕುಮಾರ ಮಹಾರಾಜರು ಮತ್ತೆ ಉಪವಾಸ ಮುಂದುವರೆಸಿರುವುದು ಮತ್ತು ರೈತರ ಹೋರಾಟ ತೀವ್ರಗೊಳಿಸುತ್ತಿದ್ದಾರೆ ಎಂಬ ಮಾಹಿತಿಯ ಹಿನ್ನೆಲೆಯಲ್ಲಿ ಧರಣಿ ಸ್ಥಳಕ್ಕೆ ಆಗಮಿಸಿದ ಅಪರ ಜಿಲ್ಲಾಧಿಕಾರಿ ದುರಗೇಶ ರುದ್ರಾಕ್ಷಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ತಹಸೀಲ್ದಾರ ಧನಂಜಯ ಎಂ ಅವರು ಫೆಡರೇಶನ್ ಮೂಲಕ ಖರೀದಿ ಕೇಂದ್ರ ಪ್ರಾರಂಭಿಸುವ ಬಗ್ಗೆ ಸರ್ಕಾರದ ಮಟ್ಟದಲ್ಲಿ ಪ್ರಕ್ರಿಯೆ ಪ್ರಾರಂಭಗೊಂಡಿದೆ. ಅದಕ್ಕಾಗಿಯೇ ಜಿಲ್ಲಾಧಿಕಾರಿಗಳು ಬೆಂಗಳೂರಿಗೆ ಹೋಗಿದ್ದಾರೆ. ಅವರ ನಿರ್ದೇಶನದಂತೆ ಮಂಗಳವಾರ/ ಬುಧವಾರದೊಳಗೆ ಲಕ್ಷ್ಮೇಶ್ವರದಲ್ಲಿ ಖರೀದಿ ಕೇಂದ್ರ ಪ್ರಾರಂಭಿಸಲಾಗುವುದು. ರೈತರು ತಾಳ್ಮೆ, ಸಹನೆಯಿಂದ ಇರಬೇಕು ಮತ್ತು ಉಪವಾಸ ಕೈಬಿಡಿ ಎಂದು ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಉಪವಾಸ ನಿರತ ಆದ್ರಳ್ಳಿ ಶ್ರೀಗಳು, ಸರ್ಕಾರ ಈಗಾಗಲೇ ರೈತ ಹೋರಾಟಗಾರರ ನಂಬಿಕೆ-ವಿಶ್ವಾಸ ಕಳೆದುಕೊಂಡಿದೆ. ಕಳೆದ 15 ದಿನಗಳಿಂದ ರೈತರು ನಮ್ಮನ್ನು ನಾವು ದಂಡಿಸಿಕೊಂಡು ಯಾರಿಗೂ ತೊಂದರೆಯಾಗದಂತೆ ಸಮಾಧಾನದಿಂದ ಹೋರಾಟ ಮಾಡಿದ್ದೇವೆ. ಅಧಿಕಾರಿಗಳು ನಿಮ್ಮ ಕೆಲಸ ನೀವು ಮಾಡಿದ್ದೀರಿ. ಸೋಮವಾರದಿಂದ ಹೋರಾಟದ ಸ್ವರೂಪ ತೀವ್ರಗೊಳಿಸುತ್ತೇವೆ. ನಾನಂತೂ ಇಂದಿನಿಂದ ಮತ್ತೆ ಹನಿ ನೀರೂ ಕುಡಿಯುವುದಿಲ್ಲ, ರೈತರಿಗಾಗಿ ಆತ್ಮ ಸಂತೋಷದಿಂದ ಪ್ರಾಣಬಿಡಲೂ ಸಿದ್ಧ. ಅದೇ ವೀರಸ್ವರ್ಗ ಎಂದುಕೊಳ್ಳುತ್ತೇನೆ. ನೀವು ಮತ್ತೆ ಬರುವುದಾದರೆ ಆದೇಶ ಪ್ರತಿಯೊಂದಿಗೆ ಬನ್ನಿ ಎಂದರು.



ಕಳೆದ 13 ದಿನಗಳಿಂದಲೂ ನಿತ್ಯ ಸರದಿ ಉಪವಾಸ ವ್ರತ ಕೈಗೊಂಡಿರುವ ಪೂರ್ಣಾಜಿ ಖರಾಟೆ, ಜ್ಞಾನೋಬಾ ಬೋಮಲೆ, ಹೋರಾಟದ ನೇತೃತ್ವ ವಹಿಸಿರುವ ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ, ಸೋಮಣ್ಣ ಡಾಣಗಲ್, ಮುಂಡರಗಿ ಕಿಸಾನ ಜಾಗೃತಿ ವಿಕಾಸ ಸಂಘದ ತಾಲೂಕಾಧ್ಯಕ್ಷ ಈರಣ್ಣ ಗಟ್ಟಿ, ಮಂಜುನಾಥ ಉಪ್ಪಾರ, ಮಲ್ಲಯ್ಯ ಗೊಂಡಬಾಳಮಠ, ಜಗದೀಶಗೌಡ ಪಾಟೀಲ, ಡಾ.ಎಸ್.ಕೆ. ಪೊಲೀಸ್‌ಪಾಟೀಲ, ಅಶೋಕ ಪಾಟೀಲ, ಅರುಣ ಲಕ್ಕಣ್ಣವರ, ಪ್ರದೀಪ ಹುಣಸಿಮರದ, ಗಂಗಪ್ಪ ಕಾಳೆ, ಮಹೇಶ ಗೊಜಗೊಜಿ, ಮುತ್ತುಪೂಜಾರ, ಬೀರಪ್ಪ ಕೆರೂರ, ಮಾಂತೇಶ ಗಂಜಿಗಟ್ಟಿ, ಫಕ್ಕಿರೇಶ ಯಲಿವಾಳ ಸೇರಿ ನೂರಾರು ರೈತರು ಪಾಲ್ಗೊಂಡಿದ್ದರು. ರಾಮಗಿರಿ ಗ್ರಾಮದ ರೈತರು ಹೋರಾಟಗಾರರಿಗೆ ಬುತ್ತಿಕಟ್ಟಿಕೊಂಡು ಎತ್ತು-ಚಕ್ಕಡಿಯೊಂದಿಗೆ ಆಗಮಿಸಿದ್ದರು. ಪಟ್ಟಣದ ವಕ್ಫ್ ಆಸ್ತಿಗಳಲ್ಲಿನ ಬಾಡಿಗೆದಾರರ ಸಂಘದ ಸದಸ್ಯರು ಧರಣಿಯಲ್ಲಿ ಪಾಲ್ಗೊಂಡಿದ್ದರು.

## ‘ಸದ್ಗುರುವಿನ ಬೆರಗಿನ ಬಯಲು’ ಕೃತಿ ಬಿಡುಗಡೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಸದ್ಗುರು ಪ್ರಕಾಶನ ರಾಜೂರು ಹಾಗೂ ಬಸವೇಶ್ವರ ಪದವಿ ಕಾಲೇಜು ಗದಗ ಇವರ ಸಹಯೋಗದಲ್ಲಿ ನ.30ರಂದು ಬೆಳಿಗ್ಗೆ 10.30 ಗಂಟೆಗೆ ಭೂಮರಡ್ಡಿ ವೃತ್ತದ ಬಳಿಯಿರುವ ಬಸವೇಶ್ವರ ಪದವಿ ಕಾಲೇಜಿನಲ್ಲಿ ರಾಮಾನಂದ ರಾಜೂರ ಅವರ ‘ಸದ್ಗುರುವಿನ ಬೆರಗಿನ ಬಯಲು’ ಕೃತಿ ಲೋಕಾರ್ಪಣೆ ಸಮಾರಂಭ ಜರುಗಲಿದೆ.

ಉದ್ಘಾಟನೆಯನ್ನು ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ ನೆರವೇರಿಸುವರು. ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಕೃತಿ ಲೋಕಾರ್ಪಣೆಯನ್ನು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾಡುವರು. ಕೃತಿಯ ಕುರಿತು ಕ.ವಿ.ವಿ. ಧಾರವಾಡದ ವಿಶ್ರಾಂತ ಕುಲಸಚಿವ ಡಾ. ಜಿ.ಬಿ. ನಂದನ ಮಾತನಾಡುವರು. ನಿವೃತ್ತ ಪ್ರಾಚಾರ್ಯ ಕೆ.ಆರ್. ಕುಲಕರ್ಣಿ ಪ್ರಾಸ್ತಾವಿಕ ನುಡಿಯನ್ನಾಡುವರು. ಕೃತಿಕಾರರಾದ ರಾಮಾನಂದ ರಾಜೂರ ಉಪಸ್ಥಿತರಿರುವರು.

ಮುಖ್ಯ ಅತಿಥಿಗಳಾಗಿ ಪ.ಪೂ ಇಲಾಖೆಯ ವಿಶ್ರಾಂತ ಜಂಟಿ ನಿರ್ದೇಶಕ ವಾಯ್.




ಎಚ್. ಇಲಾಳ, ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಎಲುವು-ಕೀಲು ತಜ್ಞ ಡಾ. ಮಹಾಂತೇಶ ಹಳೇಮನಿ, ಉದ್ಯಮಿ ಅನಿಲಕುಮಾರ ಆಚಾರ ಕುಕನೂರು, ಎಚ್.ಡಿ.ಎಫ್.ಸಿ ವಿಭಾಗೀಯ ಮುಖ್ಯಸ್ಥ ಮುತ್ತಪ್ಪ ಮುರಾಬಟ್ಟಿ, ಚಿಕ್ಕಮಕ್ಕಳ ತಜ್ಞ ಡಾ. ಡಿ.ಎಚ್. ಕಡದಳ್ಳಿ ಲಿಂಗಸುಗೂರು ಇವರು ಭಾಗವಹಿಸುವರು.

ಡಾ. ಪಂ. ಶಂಕರ ಬಿನ್ನಾಳ, ಪರಶುರಾಮ ದೊಡ್ಡಮನಿ ಪಂ. ಮಾರುತಿ ಬಿನ್ನಾಳ ಇವರಿಂದ ಸಂಗೀತ ಕಾರ್ಯಕ್ರಮ ಜರುಗಲಿದೆ. ವಿಶೇಷ ಆಹ್ವಾನಿತರಾಗಿ ಪ.ಪೂ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ, ಸಹಾಯಕ ಪ್ರಾಧ್ಯಾಪಕ ಡಾ. ಈ.ಆರ್. ಲಗಳೂರು, ಜಯಶೇಖರ ವಿ.ಆರ್, ರಾಜಶೇಖರ ಕೊಡ್ಲಿ, ಸತೀಶ ಪಾಸಿ, ವೀರಪ್ಪ ಎಂ.ದೊಡ್ಡಮನಿ, ಹನುಮಂತಪ್ಪ ಎಂ.ದೊಡ್ಡಮನಿ, ಜಿ.ಬಿ. ಗುಡಿಮನಿ, ಬಸವರಾಜ ಜೋಗಪ್ಪನವರ, ಡಿ.ಬಿ. ಪೂಜಾರ, ಪ್ರಿಯಾಂಕಾ ನಡುವಿನಮನಿ, ಮಾರುತಿ ಎಂ.ಬುರಡಿ, ಹೊನ್ನಪ್ಪ ತಳ್ಳಿಹಾಳ, ಈರಣ್ಣ ಮಾದರ, ಮುತ್ತು ಮಾದರ ಆಗಮಿಸುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಹಾಗೂ ಸದ್ಗುರು ಪ್ರಕಾಶನದ ಪದಾಧಿಕಾರಿಗಳು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಜೈನ ಬಸದಿಗಳ ಜೀರ್ಣೋದ್ಧಾರಕ್ಕೆ ಆಗ್ರಹ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಜೈನ ಬಸದಿಗಳನ್ನು ಜೀರ್ಣೋದ್ಧಾರ ಮಾಡಬೇಕೆಂದು ಆಗ್ರಹಿಸಿ ಗದಗ ಜಿಲ್ಲಾ ದಿಗಂಬರ ಜೈನ ಸಂಘದ ವತಿಯಿಂದ ಮೈಸೂರಿನ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತರಾದ ದೇವರಾಜ್ ಎ ಅವರನ್ನು ಭೇಟಿಯಾಗಿ ಅಗತ್ಯ ಕ್ರಮ ಜರುಗಿಸಬೇಕೆಂದು ಮನವಿ ಸಲ್ಲಿಸಿದರು.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಗೆ ಆಧೀನಕ್ಕೆ ಒಳಪಡುವ ಗದಗ ಜಿಲ್ಲೆಯ ಜೈನ ಬಸದಿಗಳಾದ ರೋಣ ಪಟ್ಟಣದ ಭಗವಾನ ಶ್ರೀ 1008 ಪಾರ್ಶ್ವನಾಥ ದಿಗಂಬರ ಜೈನ ಮಂದಿರ ಜೀರ್ಣಾವಸ್ಥೆಯಲ್ಲಿದ್ದು, ಮಂದಿರದ ಸುತ್ತಮುತ್ತಲಿನ ಪ್ರದೇಶವನ್ನು ಸಂಪೂರ್ಣ ಒತ್ತುವರಿ ಮಾಡಲಾಗಿದೆ. ಮುಳಗುಂದ ಪಟ್ಟಣದ ಗುಡ್ಡದಲ್ಲಿರುವ ತ್ರಿಕೂಟ ಜಿನಾಲಯ ಹಾಗೂ ಭಗವಾನ ಶ್ರೀ 1008 ಚಂದ್ರಪ್ರಭು ತೀರ್ಥಂಕರರ ಮಂದಿರಗಳು ಸಂಪೂರ್ಣವಾಗಿ ಶಿಥಿಲಗೊಂಡಿವೆ.

ಇದೇ ರೀತಿಯಲ್ಲಿ ಲಕ್ಷ್ಮೇಶ್ವರ ಪಟ್ಟಣದ ನೇಮಿನಾಥ ಬಸದಿ (ಶಂಖ ಬಸದಿ) ಕೂಡ ಶಿಥಿಲವಾಗಿದ್ದು, ಗದಗ ಪ್ರವಾಸದಲ್ಲಿರುವ ತಾವು ಈ ಸ್ಥಳಗಳಿಗೆ ಸ್ವತಃ ಭೇಟಿ ನೀಡಿ ಕೂಲಂಕುಷವಾಗಿ ಪರಿಶೀಲನೆ ನಡೆಸಿ ಪಾಳು ಬಿದ್ದಿರುವ ಜೈನ ಮಂದಿಗಳನ್ನು ಜೀರ್ಣೋದ್ಧಾರ ಮಾಡಲು ತುರ್ತು ಕ್ರಮ ಜರುಗಿಸಬೇಕೆಂದು ಮನವಿಯಲ್ಲಿ ವಿನಂತಿಸಿಕೊಂಡರು.

ಮನವಿ ಸ್ವೀಕರಿಸಿದ ಆಯುಕ್ತ ದೇವರಾಜ್ ಅವರು ಈ ಕುರಿತು ಪರಿಶೀಲಿಸಿ ಮುಂದಿನ ಕ್ರಮ ಜರುಗಿಸುವದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ದಿಗಂಬರ ಜೈನ ಸಂಘದ ಉಪಾಧ್ಯಕ್ಷ ಎಂ.ಟಿ. ಕಬ್ಬಿಣ, ಪಿ.ಜಿ. ನಾವಳ್ಳಿ, ಕಾರ್ಯದರ್ಶಿ ಪ್ರಕಾಶ ಮುತ್ತಿನ, ಜಂಟಿ ಕಾರ್ಯದರ್ಶಿ ಸಂಕಪ್ಪ ನಾವಳ್ಳಿ, ಪ್ರಾಚ್ಯವಸ್ತು ಸಂಶೋಧಕ ಅ.ದ. ಕಟ್ಟಿಮನಿ ಮುಂತಾದವರಿದ್ದರು.

## ಗ್ರಾಮೀಣ ಭಾಗದಲ್ಲಿ ಪೊಲೀಸರಿಂದ ಜಾಗೃತಿ



**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇತ್ತೀಚಿನ ದಿನಗಳಲ್ಲಿ ಮನೆ ಕಳ್ಳತನ, ಬೈಕ್ ಕಳ್ಳತನ, ಸೈಬರ್ ಅಪರಾಧಗಳು ಹೆಚ್ಚುತ್ತಿರುವುದನ್ನು ಗಮನಸಿ ಗದಗ ಜಿಲ್ಲಾ ಪೊಲೀಸ್ ಇಲಾಖೆಯು ಲಕ್ಕುಂಡಿ ಗ್ರಾಮದ ಮನೆ ಮನೆಗೆ ತೆರಳಿ ಜಾಗೃತಿ ಮೂಡಿಸುತ್ತಿದ್ದಾರೆ. ಗದಗ ಗ್ರಾಮೀಣ ಠಾಣೆಯ ಪೊಲೀಸ್ ಸಿಬ್ಬಂದಿಗಳು ಮನೆ ಮನೆಗೆ ತೆರಳಿ ಕಳ್ಳತನ ತಡೆಗಟ್ಟಲು ಮುನ್ನೆಚ್ಚರಿಕೆ ಕ್ರಮವಾಗಿ ವಹಿಸಬೇಕಾದ ಕ್ರಮಗಳ ಬಗ್ಗೆ ಭಿತ್ತಿಪತ್ರಗಳನ್ನು ಹಂಚುತ್ತಿದ್ದಾರೆ.

ನಗದು ಹಣ ಮತ್ತು ಆಭರಣಗಳನ್ನು ಬ್ಯಾಂಕ್ ಲಾಕರ್‌ನಲ್ಲಿಡಬೇಕು. ಇತ್ತೀಚೆಗೆ ಹೊರಗಡೆ ನಿಲ್ಲಿಸಿರುವ ಬೈಕ್‌ಗಳ ಕಳ್ಳತನ ಹೆಚ್ಚುತ್ತಿದ್ದು, ವಾಹನಗಳಿಗಳಿಗೆ ಗುಣಮಟ್ಟದ ಹ್ಯಾಂಡ್‌ಲಾಕ್ ಮತ್ತು ಎಚ್ಚರಿಕೆಯ ಗಂಟೆ ಅಳವಡಿಸಬೇಕು. ಮನೆಯ ಹೊರಗಡೆ ಸಿ.ಸಿ. ಕ್ಯಾಮರಾ ಅಳವಡಿಸಬೇಕು. ವಾಹನ ಖರೀದಿ ಅಥವಾ ಮಾರಿದ ನಂತರ ನಿಗದಿತ ಅವಧಿಯಲ್ಲಿ ಎಲ್ಲ ದಾಖಲಾತಿಗಳ ವರ್ಗಾವಣೆ ಮಾಡಿಸಿಕೊಳ್ಳಬೇಕು. ನಿರ್ಜನ ಪ್ರದೇಶದಲ್ಲಿ ವಾಕಿಂಗ್ ಹೋಗುವುದನ್ನು ನಿಲ್ಲಿಸಬೇಕು. ಚಿನ್ನದ ಆಭರಣಗಳನ್ನು ಧರಿಸಿದಾಗ ಜಾಗೃತರಾಗಿರಬೇಕು ಮತ್ತು ಸೈಬರ್ ಕ್ರೈಂ ಕುರಿತು ಎಚ್ಚರವಾಗಿರುವಂತೆ ಜಾಗೃತಿ ಮೂಡಿಸಲಾಯಿತು.

ಗದಗ ಗ್ರಾಮೀಣ ಸಿ.ಪಿ.ಐ ಸಿದ್ರಾಮೇಶ ಗಡೇದ, ಸಿ.ಎಸ್.ಐ ವಿ.ಜಿ ಪವಾರ, ಪಿ.ಎಸ್.ಐ ಶರಣಮ್ಮ ಕವಲೂರು, ಬೀಟ್ ಪೊಲೀಸ್ ಆರ್.ಎಂ. ಉಪ್ಪಾರ ಸೇರಿದಂತೆ ಗ್ರಾಮೀಣ ಮತ್ತು ಮಹಿಳಾ ಪೊಲೀಸ್ ಠಾಣೆಯ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಇತ್ತೀಚೆಗೆ ಲಕ್ಕುಂಡಿ ಗ್ರಾಮದಲ್ಲಿ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿದ್ದು, ಹೊರಗಡೆ ಇಟ್ಟಿರುವ ಬೈಕ್, ಕೃಷಿ ಪರಿಕರಗಳು, ಜಾನುವಾರುಗಳು, ಅಂಗಡಿಗಳು, ತೋಟದಲ್ಲಿಯ ಪಂಪ್‌ಸೆಟ್‌ಗಳು ಕಳ್ಳತನವಾಗುತ್ತಿವೆ. ಆದ್ದರಿಂದ ಕಳ್ಳರನ್ನು ಪತ್ತೆ ಹಚ್ಚುವಲ್ಲಿ ಸಿ.ಸಿ ಕ್ಯಾಮರಾಗಳು ಹೆಚ್ಚು ಉಪಯೋಗವಾಗುತ್ತವೆ. ಆದ್ದರಿಂದ, ಗ್ರಾಮದ ಪ್ರಮುಖ ಸ್ಥಳಗಳಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಬೇಕೆಂದು ಗ್ರಾಮದ ಗಣ್ಯರಾದ ಅಶೋಕ ಬೂದಿಹಾಳ, ಯುವ ಮುಖಂಡ ಪ್ರಕಾಶ ಅರಹುಣಶಿ, ರಾಜು ಪಾಟೀಲ, ಬಸವರಾಜ ಮುಳ್ಳಾಳ, ಗವಿಶಿದ್ದಪ್ಪ ಯಲಿಶಿರುಂದ, ಶರಣಪ್ಪ ಮೆಣಸಿನಕಾಯಿ, ತಿಪ್ಪಣ್ಣ ಅಂಬಕ್ಕಿ, ಚಂದ್ರು ಬಣವಿ ಮುಂತಾದವರು ಒತ್ತಾಯಿಸಿದ್ದಾರೆ.

## ಅತೀ ಶೀಘ್ರದಲ್ಲೇ 18 ಸಾವಿರ ಶಿಕ್ಷಕರ ನೇಮಕ: ಸಚಿವ ಮಧು

**■ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ**

ಅತೀ ಶೀಘ್ರದಲ್ಲೇ 18 ಸಾವಿರ ಶಿಕ್ಷಕರ ನೇಮಕ ಮಾಡಿಕೊಳ್ಳಲಾಗುತ್ತಿದೆ ಎಂದು ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ಶೀಘ್ರದಲ್ಲೇ ಸರ್ಕಾರಿ ಶಾಲೆಗಳಿಗೆ 12 ಸಾವಿರ ಮತ್ತು ಅನುದಾನಿತ ಶಾಲೆಗಳಿಗೆ 6 ಸಾವಿರ ಸೇರಿ ಒಟ್ಟು 18 ಸಾವಿರ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ. ರಾಜ್ಯದಲ್ಲಿ ಯಾವುದೇ ಶಿಕ್ಷಕರ ಕೊರತೆ ಆಗದಂತೆ ನೋಡಿಕೊಳ್ಳಲಾಗುತ್ತಿದೆ. ಸರ್ಕಾರಿ ಶಾಲೆಗಳಿಗೆ 12 ಸಾವಿರ, ಅನುದಾನಿತ ಶಾಲೆಗಳಿಗೆ 6 ಸಾವಿರ ಶಿಕ್ಷಕರ ನೇಮಕ ಮಾಡಿಕೊಳ್ಳಲಾಗುತ್ತಿದೆ. ಮುಂದಿನ ಶೈಕ್ಷಣಿಕ ವರ್ಷದಲ್ಲಿ ಮಕ್ಕಳ ಸ್ವಾಗತಕ್ಕೆ ಈ ಶಿಕ್ಷಕರೇ ಉಪಸ್ಥಿತರಿರುತ್ತಾರೆ. ಅಲ್ಲಿಗೆ ನಾವು ಒಟ್ಟು 32 ಸಾವಿರ ಶಿಕ್ಷಕರ ನೇಮಕ ಮಾಡಿದ ಹಾಗೆ ಆಗುತ್ತದೆ ಎಂದು ಮಾಹಿತಿ ನೀಡಿದರು.

## ಮಧ್ಯಾಹ್ನದ ಬಿಸಿಯೂಟ ತಿಂದು ಅಸ್ವಸ್ಥ: ಆಸ್ಪತ್ರೆ ಸೇರಿದ ಮುಂಡಗೋಡ ಶಾಲಾ ವಿದ್ಯಾರ್ಥಿಗಳು!

**■ವಿಜಯಸಾಕ್ಷಿ ಸುದ್ದಿ, ಮುಂಡಗೋಡ**

ಮಧ್ಯಾಹ್ನದ ಬಿಸಿಯೂಟ ಸೇವಿಸಿ 22ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಸ್ವಸ್ಥರಾಗಿ ಆಸ್ಪತ್ರೆ ಸೇರಿರುವ ಘಟನೆ ಉತ್ತರ ಕನ್ನಡ ಜಿಲ್ಲೆಯ ಶಾಲೆಯೊಂದರಲ್ಲಿ ಜರುಗಿದೆ.

ಅಕ್ಷರ ದಾಸೋಹ ಯೋಜನೆಯಡಿಯಲ್ಲಿ ತಾಲೂಕು ಪಂಚಾಯತ್ ನೀಡುವ ಆಹಾರ ಧಾನ್ಯಗಳು ಕಳಪೆ ಮಟ್ಟದ್ದು ಎಂದು ಹೇಳಲಾಗಿದೆ. 22 ವಿದ್ಯಾರ್ಥಿಗಳು ಮಧ್ಯಾಹ್ನದ ಊಟ ಸೇವನೆ ಮಾಡಿ ಅಸ್ವಸ್ತಗೊಂಡಿದ್ದಾರೆ. ಈ ಬಗ್ಗೆ ಶಿಕ್ಷಕರನ್ನು ಕೇಳಿದಾಗ ಸರಿಯಾದ ಉತ್ತರ ನೀಡದೆ ತಮ್ಮನ್ನು ಸಮರ್ಥಿಸಿಕೊಂಡಿದ್ದಾರೆ.

ವಿದ್ಯಾರ್ಥಿಗಳು ಸೇವನೆ ಮಾಡಿದ ಆಹಾರದಲ್ಲಿ ಇಲಿ ಹಿಕ್ಕೆ ಪತ್ತೆಯಾಗಿದೆ. ಮುಂಡಗೋಡಿನ ಶಾಲೆಯಲ್ಲಿ 400 ವಿದ್ಯಾರ್ಥಿಗಳಿದ್ದು, ಅದರಲ್ಲಿ 22 ಜನ ಅಸ್ವಸ್ತಗೊಂಡಿದ್ದಾರೆ.

**ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಡಾ. ತೋಂಟದ ಶ್ರೀಗಳು**

## ಜಾತ್ರಾ ಮಹೋತ್ಸವಕ್ಕೆ ಪ್ರತಿಯೊಬ್ಬರೂ ಸಹಕರಿಸಿ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ವರ್ಷಕ್ಕೊಂದು ಬಾರಿ ಜರುಗುವ ಜಾತ್ರೆ, ಉತ್ಸವ ಆಚರಣೆಗಳು ಭಕ್ತಿಯಿಂದ ಭಕ್ತರನ್ನು ಒಂದೆಡೆ ಸೇರಿಸಿ ಸಂತೋಷದಿಂದ ಆಚರಿಸುವ ಉತ್ತಮ ವೇದಿಕೆಯಾಗಿದೆ. ಜಾತಿಯಲ್ಲಿ ಅರ್ಥವಿಲ್ಲ, ಮನುಷ್ಯತ್ವದಲ್ಲಿ ಅರ್ಥವಿದೆ. ಜಾತ್ರಾ ಮಹೋತ್ಸವಕ್ಕೆ ಪ್ರತಿಯೊಬ್ಬರೂ ಸಹಕರಿಸಬೇಕು ಎಂದು ಡಂಬಳ ತೋಂಟದಾರ್ಯ ಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿ ಹೇಳಿದರು.

ಡಂಬಳ ತೋಂಟದಾರ್ಯ ಕಲಾಭವನದಲ್ಲಿ ಶನಿವಾರ ಹಮ್ಮಿಕೊಂಡಿದ್ದ 286ನೇ ಜಗದ್ಗುರು ತೋಂಟದ ಮದರ್ಧನಾರೀಶ್ವರರ ಜಾತ್ರಾಮಹೋತ್ಸವ ಮತ್ತು ರೊಟ್ಟಿ ಜಾತ್ರೆಯ ಎಂದೇ ಪ್ರಸಿದ್ಧವಾಗಿರುವ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆಯ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.



ಜಾತ್ರೆ, ರಥೋತ್ಸವ, ಉತ್ಸವಗಳಲ್ಲಿ ಎಲ್ಲರೂ ಭಾಗವಹಿಸುವುದರಿಂದ ಅವುಗಳ ಆಚರಣೆಗೆ ಹೆಚ್ಚು ಅರ್ಥ ಮತ್ತು ಮೆರಗೂ ಬರುತ್ತದೆ. ರಥ ಎಳೆಯುವುದರ ಅರ್ಥ ಮನುಷ್ಯ ತಮ್ಮ ದೇಹ ಎಂಬ ರಥವನ್ನು ಶುದ್ಧವಾಗಿ ಇಟ್ಟುಕೊಳ್ಳುವುದಾಗಿದೆ. ಡಂಬಳ ರೊಟ್ಟಿ ಜಾತ್ರೆಯಲ್ಲಿ ಸರ್ವ ಜನಾಂಗದವರು ಒಟ್ಟಾಗಿ ಕುಳಿತುಕೊಂಡು ಊಟವನ್ನು ಮಾಡುವುದರಿಂದ ಭಾವೈಕ್ಯತೆ ಹೆಚ್ಚುತ್ತದೆ. ಇದು ಜನ ಸಾಮಾನ್ಯರ ಜಾತ್ರೆ ಎಂದೇ ಪ್ರಸಿದ್ಧವಾಗಿದೆ. ಇದಕ್ಕೆ ಭಕ್ತರೇ ಕಾರಣ. ಜಾತ್ರೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳುವುದರಿಂದ ಜನರಲ್ಲಿ ಪರಸ್ಪರ ಭಾವೈಕ್ಯತೆ ಮೂಡುತ್ತದೆ ಎಂದು ಹೇಳಿದರು.

ವೇದಮೂರ್ತಿ ರಾಜಶೇಖರಯ್ಯ ಹಿರೇಮಠ ಜಾತ್ರಾಮಹೋತ್ಸ ಜರುಗುವ ಕುರಿತು ಮಾಹಿತಿ ನೀಡಿ, ಡಂಬಳ ತೋಂಟದಾರ್ಯ ಮಠದ 286ನೇ ಜಾತ್ರಾ ಮಹೋತ್ಸವವು ಮಘಾ ನಕ್ಷತ್ರದ ಫೆ. 3ರಂದು ರಥೋತ್ಸವ, ಫೆ. 4ರಂದು ಲಘು ರಥೋತ್ಸವ ಜರುಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತೋಂಟ-ದಾರ್ಯ ಮಠದ ವ್ಯವಸ್ಥಾಪಕ ಜಿ.ವ್ಹಿ. ಹಿರೇಮಠ, ಹಿರಿಯರಾದ ಮರಿತಿಮ್ಮಪ್ಪ ಆದಮ್ಮನವರ, ಫಕ್ಕನಗೌಡ ರಡ್ಡೇರ, ಮುತ್ತಣ್ಣ ಹಿರೇಮಠ, ಮಲ್ಲಣ್ಣ ಯರಾಶಿ, ಗವಿಸಿದ್ದಪ್ಪ ಬಿಸನಳ್ಳಿ, ಶಂಭಣ್ಣ ಪಟ್ಟಣಶೆಟ್ಟಿ, ವಿರೂಪಾಕ್ಷ ಲಕ್ಕುಂಡಿ, ಸಿದ್ದಣ್ಣ ನಂಜಪ್ಪನವರ, ಮುದಿಯಪ್ಪ ಗದಗಿನ, ಗವಿಸಿದ್ದಪ್ಪ ಹಳ್ಳಾಕಾರ, ಶರಣಪ್ಪ ಬಂಡಿ, ದುರಗಪ್ಪ ಹರಿಜನ, ಬಸವರಾಜ ಹಮ್ಮಿಗಿ, ಮುತ್ತಣ್ಣ ಕೊಂತಿಕಲ್ಲ, ಚಂದ್ರು ಯಳಮಲಿ, ಮರಿಯಪ್ಪ ಸಿದ್ದಣ್ಣನವರ, ಬಸಪ್ಪ ಕೊತಂಬರಿ, ಚೆನ್ನಪ್ಪ ಕರಡ್ಡಿ, ಬಸೀರಅಹ್ಮದ ತಾಂಬೋಟಿ, ಈರಣ್ಣ ಪಟ್ಟಣಶೆಟ್ಟಿ, ಪರುಶರಾಮ ವಡ್ಡರ, ಅಶೋಕ ಮಾನೆ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಇದ್ದರು. ಕಾರ್ಯಕ್ರಮವನ್ನು ಶಿಕ್ಷಕ ಆರ್.ಜಿ. ಕೊರ್ಲಹಳ್ಳಿ ನಿರೂಪಿಸಿದರು.

> **ಜಾತ್ರಾ ಸಮಿತಿ ರಚನೆ**
>
> ಫೆಬ್ರುವರಿಯಲ್ಲಿ ಜರುಗುವ ರೊಟ್ಟಿ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷರಾಗಿ ಯಲ್ಲಪ್ಪ ದಂಡಿನ, ಉಪಾಧ್ಯಕ್ಷರಾಗಿ ಯಂಕಣ್ಣ ಗಡಗಿ, ಕಾರ್ಯದರ್ಶಿಯಾಗಿ ಬಡ್ನೇಸಾಬ ಅತ್ತಾರ ಹಾಗೂ ಖಜಾಂಚಿಯಾಗಿ ತಿಮ್ಮಣ್ಣ ವಡ್ಡರ ನೇಮಕಗೊಂಡಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka